Volume : 9 | Issue : 153 | September : 02 : 2026 : Wednesday
ಸಂಪುಟ : 9 | ಸಂಚಿಕೆ : 153 | ಸೆಪ್ಟೆಂಬರ್ : 02 : 2026 : ಬುಧವಾರ

www.VIKRAMAVAHINI.com


ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI

PRGI NO: KARKAN/2018/78481



ಕಿಯಾರಾ ಅಡ್ವಾಣಿ ಪಾತ್ರಧಾರಿಯಾಗಿ ಇರ್ತಾರಾ ಎಂಬ ಕುತೂಹಲದ ನಡುವೆ, 'ಲಸ್ಟ್ ಸ್ಟೋರೀಸ್ 3' ಸೆ.18ರಂದು ಹೊಸ ಕಥೆಗಳೊಂದಿಗೆ ನೆಟ್‌ಫ್ಲಿಕ್ಸ್‌ನಲ್ಲಿ ಬಿಡುಗಡೆಯಾಗಲಿದೆ ಎಂದು ವರದಿಗಳು ತಿಳಿಸಿದೆ.

ಕಾಂಗ್ರೆಸ್ ವಿರುದ್ಧ ಬಿಜೆಪಿ 'ಬಳ್ಳಾರಿ ಚಲೋ' ಶುರು ಪುಟ 3

ಪಾರ್ಕ್ ಜಾಗದ ಶೇ.5 ರಷ್ಟು ಬಳಕೆ ಪ್ರಸ್ತಾವನೆ ವಿವರಗಳ ಪರಿಶೀಲನೆ ಪುಟ 4



■ ಸುದ್ದಿ ಚುಟುಕು

## ರಾಮ ಮಂದಿರದ ಮೊದಲ ಸಿಇಒ: ಇಂದು ಹೆಸರು ಅಂತಿಮ?

● ವಿಕ್ರಮ ವಾಹಿನಿ । ಅಯೋಧ್ಯೆ

ಅಯೋಧ್ಯೆಯ ಶ್ರೀರಾಮ ಮಂದಿರದ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ವ್ಯವಸ್ಥಿತಗೊಳಿಸಲು ಮೊದಲ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ನೇಮಕ ಪ್ರಕ್ರಿಯೆ ಅಂತಿಮ ಹಂತ ತಲುಪಿದೆ. ಸೆಪ್ಟೆಂಬರ್ 2ರಂದು ನಡೆಯಲಿರುವ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಸಭೆಯಲ್ಲಿ ಸಿಇಒ ಹೆಸರನ್ನು ಘೋಷಿಸುವ ಸಾಧ್ಯತೆ ಇದೆ.

ಸಿಇಒ ಆಯ್ಕೆಗಾಗಿ ರಚಿಸಿರುವ ಸಮಿತಿಯು ಈಗಾಗಲೇ ಮೂವರು ಸಂಭಾವ್ಯ ಅಭ್ಯರ್ಥಿಗಳ ಹೆಸರನ್ನು ಅಂತಿಮ ಪಟ್ಟಿಗೆ ಸೇರಿಸಿದೆ ಎನ್ನಲಾಗಿದೆ. ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪ್ರಮೋದ್ ಕೊಹ್ಲಿ, ನಿವೃತ್ತ ಲೆಫ್ಟಿನೆಂಟ್ ಜನರಲ್ ವಿಷ್ಣುಕಾಂತ್ ಚತುರ್ವೇದಿ ಹಾಗೂ ಪರಮಾಣು ವಿಜ್ಞಾನಿ ಸುರೇಶ್ ಹಾವ್ರೆ ಅವರು ಆಯ್ಕೆ ಸಮಿತಿಯಲ್ಲಿದ್ದಾರೆ.

ಈ ಕುರಿತು ಟ್ರಸ್ಟ್‌ನ ಖಜಾಂಚಿ ಗೋವಿಂದ ದೇವ್ ಗಿರಿ ಮಹಾರಾಜ್, ವಿಎಚ್‌ಪಿ ಪ್ರಧಾನ ಕಾರ್ಯದರ್ಶಿ ಬಜರಂಗ್ ಲಾಲ್ ಬಾಗ್ರಾ ಸೇರಿದಂತೆ ಹಿರಿಯ ಪದಾಧಿಕಾರಿಗಳು ಅಯೋಧ್ಯೆಯಲ್ಲಿ ಸಭೆ ನಡೆಸಿ ಚರ್ಚಿಸಿದ್ದಾರೆ. ಅಂತಿಮವಾಗಿ ಆಯ್ಕೆಯಾಗುವ ಅಭ್ಯರ್ಥಿಯ ಹೆಸರನ್ನು ಟ್ರಸ್ಟ್ ಅಧ್ಯಕ್ಷ ಮಹಾಂತ ನೃತ್ಯ ಗೋಪಾಲ್ ದಾಸ್ ಅವರ ಅನುಮೋದನೆಗೆ ಸಲ್ಲಿಸಲಾಗುವುದು ಎಂದು ತಿಳಿದುಬಂದಿದೆ.

ಮಂದಿರದ ಆಡಳಿತ, ಹಣಕಾಸು ನಿರ್ವಹಣೆ, ಭಕ್ತರಿಗೆ ಸೌಲಭ್ಯಗಳು ಹಾಗೂ ವಿವಿಧ ಚಟುವಟಿಕೆಗಳ ಮೇಲ್ವಿಚಾರಣೆಯನ್ನು ಸಿಇಒ ನಿರ್ವಹಿಸುವ ನಿರೀಕ್ಷೆಯಿದೆ.

## 'ನೇಪಾಳ ಪ್ರವಾಹದ ಮೀನು ತಿನ್ನಬೇಡಿ'

● ವಿಕ್ರಮ ವಾಹಿನಿ । ಪಾಟ್ನಾ

ನೇಪಾಳದಲ್ಲಿ ಸಂಭವಿಸಿದ ಪ್ರವಾಹದ ನೀರಿನೊಂದಿಗೆ ಗಂಡಕಿ ನದಿಗೆ ಹರಿದುಬರುತ್ತಿರುವ ಅಪರಿಚಿತ ಹಾಗೂ ಅಸಹಜ ಮೀನುಗಳನ್ನು ಸೇವಿಸದಂತೆ ಬಿಹಾರ ಸರ್ಕಾರ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ. ಇಂತಹ ಮೀನುಗಳನ್ನು ಸೇವಿಸಿದ ಕೆಲವರು ಅಸ್ವಸ್ಥರಾಗಿರುವ ಹಿನ್ನೆಲೆಯಲ್ಲಿ ಈ ಸೂಚನೆ ನೀಡಲಾಗಿದೆ.

ಪಶ್ಚಿಮ ಚಂಪಾರಣ್, ಪೂರ್ವ ಚಂಪಾರಣ್, ಗೋಪಾಲ್‌ಗಂಜ್, ಸಿವಾನ್ ಹಾಗೂ ಸರನ್ ಜಿಲ್ಲೆಗಳ ವ್ಯಾಪ್ತಿಯಲ್ಲಿ ದೊಡ್ಡ ಗಾತ್ರದ ಮೀನುಗಳು ಪ್ರವಾಹದ ನೀರಿನಲ್ಲಿ ತೇಲಿಬರುತ್ತಿವೆ. ಕೆಲವರು ಅವುಗಳನ್ನು ಹಿಡಿದು ಸೇವಿಸುವುದರ ಜೊತೆಗೆ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆ.

ಪ್ರವಾಹದ ನೀರಿನಲ್ಲಿ ಮೀನುಗಳು ಕೊಳಕು ನೀರು, ಸತ್ತ ಪ್ರಾಣಿಗಳು ಹಾಗೂ ಇತರ ಮಾಲಿನ್ಯಕಾರಕ ವಸ್ತುಗಳ ಸಂಪರ್ಕಕ್ಕೆ ಬರುವ ಸಾಧ್ಯತೆಯಿದ್ದು, ಬ್ಯಾಕ್ಟೀರಿಯಾ ಮತ್ತು ಇತರ ರೋಗಕಾರಕಗಳಿಂದ ಕಲುಷಿತವಾಗಿರಬಹುದು ಎಂದು ಮೀನುಗಾರಿಕೆ ಇಲಾಖೆ ತಿಳಿಸಿದೆ. ಇಂತಹ ಮೀನುಗಳ ಸೇವನೆಯಿಂದ ವಾಂತಿ, ಅತಿಸಾರ, ಹೊಟ್ಟೆ ನೋವು, ತಲೆತಿರುಗುವಿಕೆ ಸೇರಿದಂತೆ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆಯಿದೆ.

ಬಿಹಾರದ ಮೀನುಗಾರಿಕೆ ನಿರ್ದೇಶಕ ತುಷಾರ್ ಸಿಂಗ್ಲಾ ಅವರು, ನೇಪಾಳದಿಂದ ಪ್ರವಾಹದ ನೀರಿನೊಂದಿಗೆ ಬಂದಿರುವ ಅಪರಿಚಿತ ಅಥವಾ ಅಸಹಜವಾಗಿ ಕಾಣುವ ಮೀನುಗಳನ್ನು ಸೇವಿಸದಂತೆ ಸಾರ್ವಜನಿಕರಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ಪರಿಸ್ಥಿತಿ ಸಾಮಾನ್ಯವಾಗುವವರೆಗೆ ಪ್ರವಾಹದ ನೀರಿನಿಂದ ಹಿಡಿದ ಮೀನುಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸುವಂತೆ ಅವರು ಮನವಿ ಮಾಡಿದ್ದಾರೆ.

ದೊಡ್ಡ ಗಾತ್ರದ ಕೆಲವು ಮೀನುಗಳು ಒಂದರಿಂದ ಎರಡು ಕ್ವಿಂಟಲ್‌ವರೆಗೆ ತೂಕ ಹೊಂದಿದ್ದು, ಅವುಗಳ ಮೂಲ ಹಾಗೂ ಸಾವಿನ ಕಾರಣ ಸ್ಪಷ್ಟವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇಂತಹ ಮೀನುಗಳನ್ನು ಕಂಡುಬಂದಲ್ಲಿ ಹಿಡಿದು ಸೇವಿಸುವ ಅಥವಾ ಮಾರಾಟ ಮಾಡುವ ಬದಲು ಸ್ಥಳೀಯ ಆಡಳಿತ ಅಥವಾ ಜಿಲ್ಲಾ ಮೀನುಗಾರಿಕೆ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಸರ್ಕಾರ ಮನವಿ ಮಾಡಿದೆ.

ಪ್ರವಾಹ ಪರಿಸ್ಥಿತಿ ಸಂಪೂರ್ಣ ನಿಯಂತ್ರಣಕ್ಕೆ ಬರುವವರೆಗೆ ಜನರು ಆಹಾರ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ಎಚ್ಚರಿಕೆ ವಹಿಸಬೇಕು ಎಂದು ಬಿಹಾರ ಸರ್ಕಾರ ಸೂಚಿಸಿದೆ.

# ಮತ್ತೆ ಮುಡಾ ಗುಮ್ಮಾ!

**ಲೋಕಾಯುಕ್ತ ಪೊಲೀಸರು ಸಲ್ಲಿಸಿದ್ದ 'ಬಿ' ರಿಪೋರ್ಟ್ ಪ್ರಶ್ನಿಸಿ ಇಡಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಮುಡಾ ಪ್ರಕರಣ ಮತ್ತೆ ಕಾನೂನು ತಿರುವು ಪಡೆದುಕೊಂಡಿದೆ. ಅಕ್ರಮ ಡಿನೋಟಿಫಿಕೇಷನ್, ಭೂ ಪರಿವರ್ತನೆ ಸೇರಿದಂತೆ ಹಲವು ಅಂಶಗಳನ್ನು ತನಿಖೆಯಲ್ಲಿ ಪರಿಗಣಿಸಿಲ್ಲ ಎಂದು ಇಡಿ ಆರೋಪಿಸಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬ ಸದಸ್ಯರಿಗೆ ಸಂಬಂಧಿಸಿದೆ ಎನ್ನಲಾದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನ ಹಂಚಿಕೆ ಪ್ರಕರಣ ಮತ್ತೆ ಕಾನೂನು ತಿರುವು ಪಡೆದುಕೊಂಡಿದೆ. ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ 'ಬಿ' ರಿಪೋರ್ಟ್ ಪ್ರಶ್ನಿಸಿ ಜಾರಿ ನಿರ್ದೇಶನಾಲಯ (ಇಡಿ) ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಲೋಕಾಯುಕ್ತ ತನಿಖೆಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದ ಹಲವು ಪ್ರಮುಖ ಅಂಶಗಳನ್ನು ಸಮರ್ಪಕವಾಗಿ ಪರಿಗಣಿಸಲಾಗಿಲ್ಲ ಎಂದು ಇಡಿ ಆರೋಪಿಸಿದೆ. ವಿಶೇಷವಾಗಿ ಅಕ್ರಮ ಡಿನೋಟಿಫಿಕೇಷನ್, ಭೂ ಪರಿವರ್ತನೆ ಹಾಗೂ ಇಡಿ ತನಿಖೆಯಲ್ಲಿ ಬೆಳಕಿಗೆ ಬಂದಿರುವ ಅಂಶಗಳನ್ನು ಲೋಕಾಯುಕ್ತ ತನಿಖಾಧಿಕಾರಿಗಳು ಪರಿಗಣಿಸಿಲ್ಲ ಎಂದು ಇಡಿ ಪರ ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ್ ಕಾಮತ್ ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ.

ಇಡಿ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್‌ನ ಏಕಸದಸ್ಯ ಪೀಠ, ವಾದ ಆಲಿಸಿದ ಬಳಿಕ ವಿಚಾರಣೆಯನ್ನು ಸೆಪ್ಟೆಂಬರ್ 2ರಂದು ಮಧ್ಯಾಹ್ನ 2.30ಕ್ಕೆ ಮುಂದೂಡಿದೆ.

**'ಬಿ' ರಿಪೋರ್ಟ್‌ಗೆ ಹಿನ್ನೆಲೆ**

ಮುಡಾ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರು ಲೋಕಾಯುಕ್ತ ಪೊಲೀಸರು ತನಿಖೆ ನಡೆಸಿ 2025ರ ಫೆಬ್ರವರಿ 12ರಂದು ಬೆಂಗಳೂರಿನ 82ನೇ ಹೆಚ್ಚುವರಿ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯದ (ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ) ಮುಂದೆ 'ಬಿ' ರಿಪೋರ್ಟ್ ಸಲ್ಲಿಸಿದ್ದರು. ಪ್ರಕರಣದಲ್ಲಿ ಆರೋಪ ಸಾಬೀತುಪಡಿಸಲು ಅಗತ್ಯ ಸಾಕ್ಷ್ಯಾಧಾರಗಳು ಲಭ್ಯವಿಲ್ಲ ಎಂಬ ಅಂಶವನ್ನು ಒಳಗೊಂಡಿದ್ದ ಈ ವರದಿಯನ್ನು ವಿಶೇಷ ನ್ಯಾಯಾಲಯ ಅಂಗೀಕರಿಸಿತ್ತು. 2026ರ ಜನವರಿ 28ರಂದು ಈ ಕುರಿತು ನ್ಯಾಯಾಲಯ ಆದೇಶ ಹೊರಡಿಸಿತ್ತು.

ಆದರೆ, ಲೋಕಾಯುಕ್ತದ 'ಬಿ' ರಿಪೋರ್ಟ್ ಪ್ರಶ್ನಿಸಿ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಕೂಡ ನ್ಯಾಯಾಲಯದ ಮೊರೆ ಹೋಗಿದ್ದರು. ವರದಿಯನ್ನು ಮರುಪರಿಶೀಲಿಸಿ, ಪ್ರಕರಣದ ತನಿಖೆಯನ್ನು ಸ್ವತಂತ್ರ ತನಿಖಾ ಸಂಸ್ಥೆಗೆ ವಹಿಸಬೇಕು ಹಾಗೂ ಹೊಸದಾಗಿ ತನಿಖೆ ನಡೆಸಿ ವರದಿ ಸಲ್ಲಿಸಲು ನಿರ್ದೇಶನ ನೀಡಬೇಕು ಎಂದು ಅವರು ಮನವಿ ಮಾಡಿದ್ದರು.

**ಇಡಿ ಅರ್ಜಿಯಿಂದ ಮತ್ತೆ ಚರ್ಚೆ**

ಇದೀಗ ಇದೇ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯವೂ ಹೈಕೋರ್ಟ್ ಮೆಟ್ಟಿಲೇರಿರುವುದು ಪ್ರಕರಣದ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ. ಲೋಕಾಯುಕ್ತ ತನಿಖೆಯಲ್ಲಿ ಕೆಲವು ಪ್ರಮುಖ ಅಂಶಗಳನ್ನು ಕಡೆಗಣಿಸಲಾಗಿದೆ ಎಂಬ ಇಡಿ ವಾದದ ಹಿನ್ನೆಲೆಯಲ್ಲಿ, 'ಬಿ' ರಿಪೋರ್ಟ್‌ನ ಕಾನೂನು ಮಾನ್ಯತೆ ಮತ್ತು ತನಿಖೆಯ ವ್ಯಾಪ್ತಿಯ ಕುರಿತು ಮುಂದಿನ ವಿಚಾರಣೆಯಲ್ಲಿ ನ್ಯಾಯಾಲಯದ ಗಮನ ಸೆಳೆಯುವ ಸಾಧ್ಯತೆ ಇದೆ. ಮುಡಾ ಪ್ರಕರಣದಲ್ಲಿ ಭೂಮಿಯ ಸ್ವಾಧೀನ, ಡಿನೋಟಿಫಿಕೇಷನ್, ಭೂ ಪರಿವರ್ತನೆ ಹಾಗೂ ನಿವೇಶನ ಹಂಚಿಕೆಗೆ ಸಂಬಂಧಿಸಿದ ಅಂಶಗಳು ಈಗಾಗಲೇ ರಾಜಕೀಯ ಹಾಗೂ ಕಾನೂನು ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ. ಇದೀಗ ಇಡಿ ಸಲ್ಲಿಸಿರುವ ಅರ್ಜಿಯಿಂದ ಪ್ರಕರಣ ಮತ್ತೊಮ್ಮೆ ನ್ಯಾಯಾಲಯದ ವಿಚಾರಣೆಯ ಕೇಂದ್ರ ಬಿಂದು ವಾಗಿದೆ.



# ಬರದ 2ನೇ ಪಟ್ಟಿ ಶೀಘ್ರ: ಡಿಕೆಶಿ



● ವಿಕ್ರಮ ವಾಹಿನಿ । ಗದಗ

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿರುವ ಹಿನ್ನೆಲೆಯಲ್ಲಿ ಮಾರ್ಗಸೂಚಿಗಳ ಅನ್ವಯ ಅಧ್ಯಯನ ನಡೆಸಿ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಅಧಿಕಾರಿಗಳ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಜಿಲ್ಲಾ ಸಚಿವರು ಹಾಗೂ ಶಾಸಕರು ತಾಲೂಕುಗಳಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯ ವರದಿ ನೀಡಿದ್ದಾರೆ. ಅಧಿಕಾರಿಗಳ ಅಧ್ಯಯನ ವರದಿಯನ್ನೂ ಪರಿಶೀಲಿಸಿ ಕೇಂದ್ರ ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಲಾಗುವುದು ಎಂದರು.

ಗದಗ ಜಿಲ್ಲೆಯಲ್ಲಿ ಈ ಬಾರಿ ಶೇ.40ರಷ್ಟು ಮಳೆ ಕೊರತೆಯಾಗಿದ್ದು, ಹಲವು ಕಡೆ ಬಿತ್ತನೆಯೇ ನಡೆದಿಲ್ಲ. ಬಿತ್ತನೆಯಾದ ಪ್ರದೇಶಗಳಲ್ಲಿಯೂ ಬೆಳೆ ನಷ್ಟದ ಪ್ರಮಾಣ ಹೆಚ್ಚಿದೆ. ತಾವು ರೈತರ ಜಮೀನುಗಳಿಗೆ ಭೇಟಿ ನೀಡಿ ಹತ್ತಿ, ಕಡಲೆಕಾಯಿ, ಜೋಳ ಹಾಗೂ ಸೂರ್ಯಕಾಂತಿ ಬೆಳೆಗಳ ಸ್ಥಿತಿಯನ್ನು ಪರಿಶೀಲಿಸಿದ್ದಾಗಿ ತಿಳಿಸಿದರು. 3ನೇ ಪುಟಕ್ಕೆ...

# ರಾಯರೆಡ್ಡಿ ಹೇಳಿಕೆ: ಬಿಜೆಪಿ ತೀಕ್ಷ್ಣ ಪ್ರತಿಕ್ರಿಯೆ

● ವಿಕ್ರಮ ವಾಹಿನಿ । ಬೆಂಗಳೂರು



'ಇಸ್ಲಾಂ ಧರ್ಮ ಶ್ರೇಷ್ಠ' ಎಂಬ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರ ಹೇಳಿಕೆ ರಾಜಕೀಯ ವಲಯದಲ್ಲಿ ವಿವಾದಕ್ಕೆ ಕಾರಣವಾಗಿದ್ದು, ಬಿಜೆಪಿ ನಾಯಕರು ತೀವ್ರವಾಗಿ ಟೀಕಿಸಿದ್ದಾರೆ.

ಮಾಜಿ ಸಂಸದ ಪ್ರತಾಪ್ ಸಿಂಹ ಬೆಂಗಳೂರಿನಲ್ಲಿ ಮಾತನಾಡಿ, ರಾಯರೆಡ್ಡಿ ಹಲವು ಬಾರಿ ಶಾಸಕರಾಗಿ, ಸಚಿವರಾಗಿದ್ದರೂ ಸಮಾಧಾನ ಸಿಕ್ಕಿಲ್ಲವೇ ಎಂದು ವ್ಯಂಗ್ಯವಾಡಿದರು. ಇಸ್ಲಾಂ ಧರ್ಮದ ಕುರಿತು ರಾಯರೆಡ್ಡಿ ನೀಡಿರುವ ಹೇಳಿಕೆ ಅವರ ವೈಯಕ್ತಿಕ ನಂಬಿಕೆಯಾಗಿದ್ದರೆ ಅದನ್ನು ಸಾರ್ವಜನಿಕವಾಗಿ ಈ ರೀತಿಯಲ್ಲಿ ವ್ಯಕ್ತಪಡಿಸುವ ಅಗತ್ಯವಿತ್ತೆ ಎಂದು ಪ್ರಶ್ನಿಸಿದರು.

ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಕೂಡ ರಾಯರೆಡ್ಡಿ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದರು. ಹೊಸಪೇಟೆಯಲ್ಲಿ ಮಾತನಾಡಿದ ಅವರು, ಸನಾತನ ಧರ್ಮಕ್ಕೆ ಆದಿ-ಅಂತ್ಯವಿಲ್ಲ. ಇಸ್ಲಾಂ, ಕ್ರಿಶ್ಚಿಯನ್ ಸೇರಿದಂತೆ ಹಲವು ಧರ್ಮಗಳು ನಿರ್ದಿಷ್ಟ ವ್ಯಕ್ತಿಗಳಿಂದ ಸ್ಥಾಪಿತವಾದ ಮತಗಳಾಗಿವೆ ಎಂದು ಹೇಳಿದರು. ಮಹಿಳೆಯರ ಹಕ್ಕುಗಳು, ಧಾರ್ಮಿಕ ಆಚರಣೆಗಳು ಹಾಗೂ ಇತರ ವಿಚಾರಗಳನ್ನು ಪ್ರಸ್ತಾಪಿಸಿದ ಸಿ.ಟಿ. ರವಿ, ಈ ಬಗ್ಗೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಬರಹಗಳನ್ನು ಓದಬೇಕು ಎಂದು ಸಲಹೆ ನೀಡಿದರು. ರಾಯರೆಡ್ಡಿ ಅವರು ಯಾವ ಕಾರಣಕ್ಕಾಗಿ ಇಸ್ಲಾಂ ಧರ್ಮವನ್ನು ಶ್ರೇಷ್ಠವೆಂದು ಹೇಳಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ರಾಯರೆಡ್ಡಿ ಅವರ ಹೇಳಿಕೆಯನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜಕೀಯ ವಾಗ್ದಾಳಿ ಮುಂದುವರಿಸಿದ್ದು, ಹೇಳಿಕೆ ಇದೀಗ ರಾಜ್ಯ ರಾಜಕೀಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

## ಲಂಚ ಪ್ರಕರಣ: ಉಪ ತಹಶೀಲ್ದಾರ್‌ಗೆ 4 ವರ್ಷ ಜೈಲು

● ವಿಕ್ರಮ ವಾಹಿನಿ । ಶಿವಮೊಗ್ಗ

ಅಂಗವಿಕಲರ ಪಿಂಚಣಿ ಸೌಲಭ್ಯ ಮಂಜೂರು ಮಾಡಲು ಲಂಚಕ್ಕೆ ಬೇಡಿಕೆಯಿಟ್ಟು, ಮುಂಗಡವಾಗಿ ರೂ 5 ಸಾವಿರ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿಬಿದ್ದಿದ್ದ ಭದ್ರಾವತಿ ತಾಲೂಕಿನ ಕಲ್ಲಿಹಾಳ್ ನಾಡಕಚೇರಿಯ ಉಪ ತಹಶೀಲ್ದಾರ್ ಪುಷ್ಪಲತಾ ಅವರಿಗೆ ನ್ಯಾಯಾಲಯ 4 ವರ್ಷ ಜೈಲು ಶಿಕ್ಷೆ ಹಾಗೂ ರೂ 40 ಸಾವಿರ ದಂಡ ವಿಧಿಸಿದೆ.

ಭದ್ರಾವತಿ ತಾಲೂಕಿನ ಡಿ.ಬಿ. ಹಳ್ಳಿ ನಿವಾಸಿ ಗಿರೀಶ್ ಅವರು ತಮ್ಮ ಹುಟ್ಟು ಮೂಕ ತಂದೆಗೆ ಅಂಗವಿಕಲರ ಪಿಂಚಣಿ ಸೌಲಭ್ಯ ಪಡೆಯಲು ಕಲ್ಲಿಹಾಳ್ ನಾಡಕಚೇರಿಗೆ ಅರ್ಜಿ ಸಲ್ಲಿಸಿದ್ದರು. ಈ ವೇಳೆ ಉಪ ತಹಶೀಲ್ದಾರ್ ಪುಷ್ಪಲತಾ ಅವರು ಸೌಲಭ್ಯ ಕಲ್ಪಿಸಲು ರೂ 10 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ಈ ಕುರಿತು ಗಿರೀಶ್ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ದೂರಿನ ಆಧಾರದ ಮೇಲೆ 2017ರ ಸೆಪ್ಟೆಂಬರ್ 21ರಂದು ಭದ್ರಾವತಿ ತಾಲೂಕು ಕಚೇರಿಯಲ್ಲಿ ಕಾರ್ಯಾಚರಣೆ ನಡೆಸಿದ ಲೋಕಾಯುಕ್ತ ಪೊಲೀಸರು, ಗಿರೀಶ್ ಅವರಿಂದ ರೂ 5 ಸಾವಿರ ಲಂಚ ಸ್ವೀಕರಿಸುತ್ತಿದ್ದ ವೇಳೆ ಪುಷ್ಪಲತಾ ಅವರನ್ನು ಬಂಧಿಸಿದ್ದರು.

ಪ್ರಕರಣದ ತನಿಖೆಯನ್ನು ಪೊಲೀಸ್ ಇನ್‌ಸ್ಪೆಕ್ಟರ್ ಹೆಚ್.ಎಸ್. ತಿಪ್ಪೇಸ್ವಾಮಿ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಸುದೀರ್ಘ ವಿಚಾರಣೆ ನಡೆಸಿದ ಶಿವಮೊಗ್ಗದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಹಾಗೂ ವಿಶೇಷ ನ್ಯಾಯಾಲಯವು ಆರೋಪ ಸಾಬೀತಾಗಿದೆ ಎಂದು ತೀರ್ಮಾನಿಸಿ ಶಿಕ್ಷೆ ಪ್ರಕಟಿಸಿದೆ.

ಸರ್ಕಾರದ ಪರವಾಗಿ ವಿಶೇಷ ಸಾರ್ವಜನಿಕ ಅಭಿಯೋಜಕ ಸುಂದರ್ ರಾಜ್ ಅವರು ವಾದ ಮಂಡಿಸಿದ್ದರು.

## ದೇಶಾದ್ಯಂತ ಒಂದೇ ಸಮಯ: 2027ರಿಂದ IST ಕಡ್ಡಾಯ

● ವಿಕ್ರಮ ವಾಹಿನಿ । ನವದೆಹಲಿ

ದೇಶಾದ್ಯಂತ ಏಕರೂಪದ ಅಧಿಕೃತ ಸಮಯ ಜಾರಿಗೆ ತರುವ ಉದ್ದೇಶದಿಂದ ಕೇಂದ್ರ ಸರ್ಕಾರ 'ಲೀಗಲ್ ಮೆಟ್ರಾಲಜಿ (ಭಾರತೀಯ ಪ್ರಮಾಣಿತ ಸಮಯ) ನಿಯಮಗಳು, 2026' ಅನ್ನು ಅಧಿಸೂಚಿಸಿದೆ. ಗೆಜೆಟ್‌ನಲ್ಲಿ ಪ್ರಕಟವಾದ 180 ದಿನಗಳ ಬಳಿಕ ನಿಯಮಗಳು ಜಾರಿಗೆ ಬರಲಿವೆ.

ಹೊಸ ವ್ಯವಸ್ಥೆಯಡಿ ಬ್ಯಾಂಕಿಂಗ್, ರೈಲ್ವೆ, ಟೆಲಿಕಾಂ, ಡಿಜಿಟಲ್ ಸೇವೆಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಭಾರತೀಯ ಪ್ರಮಾಣಿತ ಸಮಯ (IST) ಬಳಸುವುದು ಕಡ್ಡಾಯವಾಗಲಿದೆ. ಸಮಯದ ನಿಖರತೆ ಹಾಗೂ ಸಮನ್ವಯ ಹೆಚ್ಚಿಸುವುದು ಇದರ ಉದ್ದೇಶವಾಗಿದೆ.

ದೇಶದ ಸಮಯ ವ್ಯವಸ್ಥೆಯಲ್ಲಿ ಸ್ವಾವಲಂಬನೆ ಹೆಚ್ಚಿಸಲು ಇಸ್ರೋ ಅಭಿವೃದ್ಧಿಪಡಿಸಿರುವ ನ್ಯಾವಿಕ್ (NavIC) ತಂತ್ರಜ್ಞಾನವನ್ನು ಬಳಸುವ ಉದ್ದೇಶವಿದೆ. ಇದರಿಂದ ವಿದೇಶಿ ಉಪಗ್ರಹ ಆಧಾರಿತ ಸಮಯ ವ್ಯವಸ್ಥೆಗಳ ಮೇಲಿನ ಅವಲಂಬನೆ ಕಡಿಮೆಯಾಗಲಿದೆ.

ಹೊಸ ನಿಯಮದಿಂದ ಮೊಬೈಲ್, ಕಂಪ್ಯೂಟರ್, ಆನ್‌ಲೈನ್ ಟಿಕೆಟ್ ಹಾಗೂ ಹಣಕಾಸು ವಹಿವಾಟುಗಳಲ್ಲೂ ಏಕರೂಪದ ಅಧಿಕೃತ ಸಮಯಕ್ಕೆ ಆದ್ಯತೆ ಸಿಗಲಿದೆ.

## 2028ಕ್ಕೆ ರಾಜ್ಯ ರಾಜಕಾರಣಕ್ಕೆ ಮರಳುವೆ: ಎಚ್‌ಡಿಕೆ

● ವಿಕ್ರಮ ವಾಹಿನಿ । ಬೆಂಗಳೂರು


2028ರ ವಿಧಾನಸಭಾ ಚುನಾವಣೆಯ ವೇಳೆಗೆ ರಾಜ್ಯ ರಾಜಕಾರಣಕ್ಕೆ ಮರಳುವುದಾಗಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ 'ಏಳೂವರೆ ವರ್ಷ ಗೂಟ ಹೊಡೆದುಕೊಂಡು ಇರುತ್ತೇನೆ' ಎಂಬ ಹೇಳಿಕೆಗೆ ತಿರುಗೇಟು ನೀಡಿದ ಅವರು, "ಆಗ ಯಾರ ಗೂಟ ಇರುತ್ತದೆ, ಜನ ಯಾರ ಗೂಟ ಕಿತ್ತಾಕುತ್ತಾರೆ ನೋಡೋಣ" ಎಂದು ವ್ಯಂಗ್ಯವಾಡಿದರು.

ರಾಜ್ಯ ರಾಜಕಾರಣಕ್ಕೆ ಮರಳುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ, "ಈಗ ಅಲ್ಲ, 2028ರ ಸಾರ್ವತ್ರಿಕ ಚುನಾವಣೆಗೆ ರಾಜ್ಯ ರಾಜಕಾರಣಕ್ಕೆ ಬರುತ್ತೇನೆ" ಎಂದರು.

ತಮ್ಮ ಕುಟುಂಬದ ವಿರುದ್ಧ ಹಲವು ರೀತಿಯ ಆರೋಪಗಳು ಹಾಗೂ ಹೇಳಿಕೆಗಳನ್ನು ನೀಡಲಾಗಿದ್ದರೂ ಸಹಿಸಿಕೊಂಡಿದ್ದೇವೆ. ರಾಜ್ಯದ ಆಸ್ತಿ ಉಳಿಸಲು ಹೋರಾಟ ನಡೆಸಿದ್ದು, ಯಾವುದೇ ವಿಚಾರದಲ್ಲಿ ರಾಜಿ ಮಾಡಿಕೊಂಡಿಲ್ಲ. ಅದನ್ನು ಧಮ್ಕಿ ಎಂದು ಬಿಂಬಿಸಲಾಗಿದೆ ಎಂದು ಅವರು ಆರೋಪಿಸಿದರು.

ಕೆಪಿಎಸ್‌ಸಿ ವಿಚಾರದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಮಾಡಿರುವ ಆರೋಪಕ್ಕೂ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ತಮ್ಮ ವಿರುದ್ಧದ ಆರೋಪಗಳಿಗೆ ದಾಖಲೆಗಳ ಮೂಲಕವೇ ಉತ್ತರ ನೀಡುವುದಾಗಿ ಹೇಳಿದರು. ಹಿಂದಿನ ಕೆಪಿಎಸ್‌ಸಿ ಅಧ್ಯಕ್ಷರನ್ನು 53 ದಿನ ಜೈಲಿಗೆ ಕಳುಹಿಸಲಾಗಿತ್ತು. ಆದರೆ ನ್ಯಾಯಾಲಯದ ವಿಚಾರಣೆಯಲ್ಲಿ ಆರೋಪಗಳಿಗೆ ಸೂಕ್ತ ದಾಖಲೆಗಳ ಕೊರತೆ ಕುರಿತು ಪ್ರಶ್ನೆಗಳು ಎದುರಾದವು ಎಂದು ಅವರು ಟೀಕಿಸಿದರು.

ರಾಜ್ಯದ ರಾಜಕೀಯ ಬೆಳವಣಿಗೆಗಳು ಹಾಗೂ ಆಡಳಿತದ ವಿರುದ್ಧ ತಮ್ಮ ಹೋರಾಟ ಮುಂದುವರಿಯಲಿದೆ ಎಂದು ಕುಮಾರಸ್ವಾಮಿ ತಿಳಿಸಿದರು. ಇದೇ ವೇಳೆ, 2028ರ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯದಲ್ಲಿ ರಾಜಕೀಯ ಚಟುವಟಿಕೆಗಳು ಮತ್ತಷ್ಟು ಚುರುಕುಗೊಳ್ಳಲಿವೆ ಎಂದು ಅವರು ಹೇಳಿದರು.



# ಎಫ್‌ಐಆರ್ ರದ್ದಾದ ಬೆನ್ನಲ್ಲೇ ಸಿಜೆಪಿ ಪ್ರತಿಭಟನೆ ವಾಪಸ್

● ವಿಕ್ರಮ ವಾಹಿನಿ । ನವದೆಹಲಿ

ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ಜುಲೈನಲ್ಲಿ ನಡೆದ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ದಾಖಲಿಸಲಾಗಿದ್ದ ಎಫ್‌ಐಆರ್‌ಗಳನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದ ಹಿನ್ನೆಲೆಯಲ್ಲಿ, ಸೆಪ್ಟೆಂಬರ್ 5ರಂದು ದೆಹಲಿಯಲ್ಲಿ ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆಯನ್ನು ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ) ಹಿಂಪಡೆದಿದೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ಜುಲೈ 20ರಿಂದ 25ರವರೆಗೆ ವಿದ್ಯಾರ್ಥಿಗಳು ದೇಶದ ವಿವಿಧೆಡೆ ಪ್ರತಿಭಟನೆ ನಡೆಸಿದ್ದರು. ಈ ಸಂದರ್ಭದಲ್ಲಿ ಉಂಟಾದ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಹಲವು ವಿದ್ಯಾರ್ಥಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು.

ವಿದ್ಯಾರ್ಥಿಗಳ ವಿರುದ್ಧದ ಪ್ರಕರಣಗಳನ್ನು ರದ್ದುಪಡಿಸುವಂತೆ ಕೋರಿ ವಿವಿಧ ರಾಜ್ಯಗಳು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದವು. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠ ವಿಚಾರಣೆ ನಡೆಸಿ ಎಫ್‌ಐಆರ್‌ಗಳನ್ನು ರದ್ದುಪಡಿಸುವ ಆದೇಶ ನೀಡಿದೆ.





**ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ದಾಖಲಿಸಿದ್ದ ಎಫ್‌ಐಆರ್‌ಗಳನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದ ಹಿನ್ನೆಲೆಯಲ್ಲಿ, ಸಿಜೆಪಿ ಸೆ.5ರಂದು ದೆಹಲಿಯಲ್ಲಿ ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆಯನ್ನು ಹಿಂಪಡೆದಿದೆ. ಕೇಂದ್ರದ ಭರವಸೆ ಹಾಗೂ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.**

ಸುಪ್ರೀಂ ಕೋರ್ಟ್ ಆದೇಶ ಹಾಗೂ ಕೇಂದ್ರ ಸರ್ಕಾರದ ಸಕಾರಾತ್ಮಕ ಭರವಸೆಯ ಹಿನ್ನೆಲೆಯಲ್ಲಿ ಸೆ.5ರ ಪ್ರತಿಭಟನೆಯನ್ನು ಹಿಂಪಡೆಯಲು ನಿರ್ಧರಿಸಲಾಗಿದೆ ಎಂದು ಸಿಜೆಪಿ ಸಹ ಸಂಯೋಜಕ ಸೌರವ್ ಗುಪ್ತಾ ತಿಳಿಸಿದ್ದಾರೆ. ನ್ಯಾಯಾಲಯದ ಆದೇಶವನ್ನು ಕೇಂದ್ರ ಸರ್ಕಾರ ಪಾಲಿಸುತ್ತದೆ ಎಂಬ ವಿಶ್ವಾಸವಿದ್ದು, ವಿದ್ಯಾರ್ಥಿಗಳ ಮೇಲಿನ ಪ್ರಕರಣಗಳನ್ನು ರದ್ದುಪಡಿಸಿದ್ದಕ್ಕಾಗಿ ನ್ಯಾಯಾಲಯಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

ನೀಟ್ ಪರೀಕ್ಷೆ ರದ್ದಾದ ಬಳಿಕ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಪರಿಹಾರ ನೀಡುವ ಕುರಿತು ಕೇಂದ್ರ ಸರ್ಕಾರ ನೀಡಿರುವ ಭರವಸೆಯನ್ನು ಈಡೇರಿಸಲು ಬದ್ಧವಾಗಿದೆ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಪರಿಹಾರಕ್ಕೆ ಸಂಬಂಧಿಸಿದ ಕಾರ್ಯವಿಧಾನ ರೂಪಿಸಲು ಮೂರು ತಿಂಗಳ ಕಾಲಾವಕಾಶ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.

ಕೇಂದ್ರ ಸರ್ಕಾರದ ಭರವಸೆ ಈಡೇರಿಲ್ಲ ಎಂದು ಆರೋಪಿಸಿ ಸಿಜೆಪಿ ಸೆ.5ರಂದು ದೆಹಲಿಯಲ್ಲಿ ಪ್ರತಿಭಟನೆಗೆ ಕರೆ ನೀಡಿತ್ತು. ಇದೀಗ ಸುಪ್ರೀಂ ಕೋರ್ಟ್ ಎಫ್‌ಐಆರ್ ರದ್ದುಪಡಿಸಿರುವ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆಯಲಾಗಿದೆ.



**ನೇಪಾಳದಲ್ಲಿ ಕಳೆದ ತಿಂಗಳು ನಡೆದ ದಿಡೀರ್ ಪ್ರವಾಹದಿಂದ ಸಹಸ್ರಾರು ಮಂದಿ ಸಾವನ್ನಪ್ಪಿದ್ದು, ಲಕ್ಷಾಂತರ ಮಂದಿ ಮನೆ ಮಠಗಳನ್ನು ಕಳೆದುಕೊಂಡು ಬೀದಿಪಾಲಾಗಿದ್ದಾರೆ. ಈ ನಡುವೆ ನೇಪಾಳದಲ್ಲಿ ಕಂಡು ಬಂದ ಎರಡುವರೆ ವರ್ಷದ ತಂಗಿಯನ್ನು ರಕ್ಷಿಸುತ್ತಿರುವ ನಾಲ್ಕು ವರ್ಷದ ಅಣ್ಣನ ಈ ಚಿತ್ರವು ಅಲ್ಲಿನ ಪ್ರವಾಹದ ಭೀಕರ ಬರ್ಬರತೆಗೆ ಸಾಕ್ಷಿಯಾಗಿತ್ತು.**

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

## ಸವಿ ವಾಹಿನಿ

"ಜಗತ್ತಿನಲ್ಲಿ ಎಂಥವರೇ ಆಗಿರಲಿ ರೋಗ, ದುಃಖ, ಮುಪ್ಪು, ಮತ್ತು ಸಾವು, ಈ ನಾಲ್ಕರಿಂದ ತಪ್ಪಿಸಿಕೊಳ್ಳಲು ಯಾರಿಗೂ ಸಾಧ್ಯವಿಲ್ಲ ..! ಇದು ತತ್ವಜ್ಞಾನವಲ್ಲ ಪ್ರಕೃತಿ ಸತ್ಯ."

## ದಿನ ಪಂಚಾಂಗ

ಸೆಪ್ಟೆಂಬರ್, 02-2026, ಬುಧವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ. ಷಷ್ಠಿ ತಿಥಿ ರಾ-03:50 ಭರಣಿ ನಕ್ಷತ್ರ ರಾ-02:21 ರಾಹುಕಾಲ ಮ-12:19-01:51 ಬಾಗೇವಾಡಿ ಜಾತ್ರೆ, ತಲಕಾಡು ಬಾಲಕೃಷ್ಣಾನಂದ ವರ್ಧಂತಿ, ಸೊಂಡೂರು ಕುಮಾರಸ್ವಾಮಿ ವಿಶೇಷ ಪೂಜೆ, ಬಸವನ ಬಾಗೇವಾಡಿ ಬಸವೇಶ್ವರ ಜಾತ್ರೆ, ಗದಗ ಬಸವೇಶ್ವರನಗರ ವೀರಭದ್ರ ರಥ

## ಆಧ್ಯಾತ್ಮ

# ವಿಶ್ವದ ಏಕೈಕ 'ಓಂ' ಆಕಾರದ ಶಿವ ದೇವಾಲಯ



● ವಿಕ್ರಮ ವಾಹಿನಿ | ಪಾಲಿ (ರಾಜಸ್ಥಾನ)

ಭಾರತದ ಧಾರ್ಮಿಕ ಪರಂಪರೆ ಹಾಗೂ ವಾಸ್ತುಶಿಲ್ಪದ ವೈಭವಕ್ಕೆ ಮತ್ತೊಂದು ಅಪರೂಪದ ಉದಾಹರಣೆಯಾಗಿ ರಾಜಸ್ಥಾನದ ಪಾಲಿ ಜಿಲ್ಲೆಯ ಜಾದನ್ ಗ್ರಾಮದಲ್ಲಿರುವ 'ಓಂ ಆಕಾರದ ಶಿವ ದೇವಾಲಯ' ಗಮನ ಸೆಳೆಯುತ್ತಿದೆ. ಪವಿತ್ರ 'ಓಂ' ಸಂಕೇತದ ಆಕಾರದಲ್ಲಿ ನಿರ್ಮಿಸಲಾಗಿರುವ ಈ ದೇವಾಲಯವು ಭಕ್ತರಿಗೆ ಆಧ್ಯಾತ್ಮಿಕ ಅನುಭವದ ಜೊತೆಗೆ ವಿಶಿಷ್ಟ ವಾಸ್ತುಶಿಲ್ಪದ ಅನುಭವವನ್ನೂ ನೀಡುತ್ತಿದೆ. 'ಓಂ' ಹಿಂದೂ ಧರ್ಮದಲ್ಲಿ ಸೃಷ್ಟಿ, ವಿಶ್ವಚೈತನ್ಯ ಹಾಗೂ ಪರಮ ಪ್ರಜ್ಞೆಯ ಸಂಕೇತವಾಗಿ ಪರಿಗಣಿಸಲಾಗುತ್ತದೆ.

ಸುಮಾರು 250 ಎಕರೆ ವಿಶಾಲ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಈ ದೇವಾಲಯ ಸಂಕೀರ್ಣವು ಸಾಂಪ್ರದಾಯಿಕ ನಾಗರ ವಾಸ್ತುಶಿಲ್ಪ ಶೈಲಿಯನ್ನು ಆಧರಿಸಿದೆ. ದೇವಾಲಯದ ವಿನ್ಯಾಸ, ಕಲ್ಲಿನ ಕೆತ್ತನೆಗಳು, ವಿಶಾಲ ಆವರಣ ಹಾಗೂ ಧಾರ್ಮಿಕ ಸಂಕೇತಗಳ ಬಳಕೆ ಪ್ರವಾಸಿಗರ ಗಮನ ಸೆಳೆಯುತ್ತಿವೆ. ದೇವಾಲಯದ ಮುಖ್ಯ ರಚನೆ ಸುಮಾರು 135 ಅಡಿ ಎತ್ತರ ಹೊಂದಿದ್ದು, ಸುಮಾರು 2,000 ಕೆತ್ತನೆಯ ಕಂಬಗಳ ಮೇಲೆ ನಿರ್ಮಿಸಲಾಗಿದೆ ಎಂದು ತಿಳಿಸಲಾಗಿದೆ.


ದೇವಾಲಯದ ಪ್ರಮುಖ ವೈಶಿಷ್ಟ್ಯವೆಂದರೆ ಇಲ್ಲಿ ಪ್ರತಿಷ್ಠಾಪಿಸಲಾಗಿರುವ 1,008 ಶಿವಲಿಂಗಗಳು. ಶಿವನ ಆರಾಧನೆಗೆ ಸಂಬಂಧಿಸಿದ ವಿವಿಧ ಧಾರ್ಮಿಕ ಸಂಕೇತಗಳು ಹಾಗೂ ಶಿಲ್ಪಗಳು ದೇವಾಲಯದ ಆಧ್ಯಾತ್ಮಿಕ ವಾತಾವರಣವನ್ನು ಮತ್ತಷ್ಟು ಹೆಚ್ಚಿಸಿವೆ. ಭಾರತದ ಪ್ರಸಿದ್ಧ 12 ಜ್ಯೋತಿರ್ಲಿಂಗಗಳ ಪ್ರತಿಕೃತಿಗಳನ್ನೂ ಇಲ್ಲಿ ಸ್ಥಾಪಿಸಲಾಗಿದೆ. ದೇವಾಲಯದ ನಿರ್ಮಾಣದಲ್ಲಿ 108 ಸಂಖ್ಯೆಗೆ ವಿಶೇಷ ಮಹತ್ವ ನೀಡಲಾಗಿದೆ. ಅದರಂತೆ 108 ಕೊಠಡಿಗಳನ್ನು ನಿರ್ಮಿಸಲಾಗಿದೆ. ದೇವಾಲಯದ ಆವರಣದಲ್ಲಿ ನಿರ್ಮಿಸಿರುವ ಕೃತಕ ಸರೋವರವೂ ಪ್ರವಾಸಿಗರನ್ನು ಆಕರ್ಷಿಸುತ್ತಿದ್ದು, ದೇವಾಲಯದ ಭವ್ಯತೆಗೆ ಮತ್ತಷ್ಟು ಮೆರುಗು ನೀಡಿದೆ. ಮುಖ್ಯ ದೇವಾಲಯದ ಮೇಲ್ಭಾಗದಲ್ಲಿರುವ ವಿಶೇಷ ಕಲ್ಲಿನಿಂದ ನಿರ್ಮಿಸಿದ ಶಿವಲಿಂಗವೂ ಪ್ರಮುಖ ಆಕರ್ಷಣೆಯಾಗಿದೆ.

ಈ ಭವ್ಯ ದೇವಾಲಯ ಹಾಗೂ ಆಶ್ರಮದ ಪರಿಕಲ್ಪನೆಯ ಹಿಂದೆ ವಿಶ್ವಗುರು ಮಹಾ ಮಂಡಲೇಶ್ವರ ಪರಮಹಂಸ ಸ್ವಾಮಿ ಮಹೇಶ್ವರಾನಂದ ಪುರಿಜಿ ಮಹಾರಾಜ್ ಅವರ ದೂರದೃಷ್ಟಿಯಿದೆ. ಆಧ್ಯಾತ್ಮಿಕ ಸಾಧನೆ, ಧ್ಯಾನ, ಯೋಗ ಹಾಗೂ ಭಾರತೀಯ ತತ್ವಶಾಸ್ತ್ರದ ಅಧ್ಯಯನಕ್ಕೆ ಅನುಕೂಲವಾಗುವ ಕೇಂದ್ರವಾಗಿ 'ಓಂ ಆಶ್ರಮ'ವನ್ನು ಅಭಿವೃದ್ಧಿಪಡಿಸಲಾಗಿದೆ.

'ಓಂ' ಎಂಬ ಸಾರ್ವತ್ರಿಕ ಧ್ವನಿಯ ಆಧ್ಯಾತ್ಮಿಕ ಮಹತ್ವವನ್ನು ಅರಿತುಕೊಳ್ಳಲು ಹಾಗೂ ಧ್ಯಾನದ ಮೂಲಕ ಆತ್ಮಶಾಂತಿಯನ್ನು ಪಡೆಯಲು ಭಕ್ತರಿಗೆ ಅವಕಾಶ ಕಲ್ಪಿಸುವುದು ಆಶ್ರಮದ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ. ದೇವಾಲಯದ ಹೃದಯಭಾಗದಲ್ಲಿ ಗುರು ಮಾಧವಾನಂದಜಿ ಅವರ ಸಮಾಧಿಯನ್ನೂ ಸ್ಥಾಪಿಸಲಾಗಿದೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ: ಹೀಗೊಂದು ಸುಧಾರಣೆ

**ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸುಧಾರಣೆಗಳು ಕೇವಲ ಉತ್ತೀರ್ಣ ಪ್ರಮಾಣ ಹೆಚ್ಚಿಸುವುದಕ್ಕೆ ಸೀಮಿತವಾಗದೆ, ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವಂತಿರಬೇಕು. ಆಂತರಿಕ ಮೌಲ್ಯಮಾಪನದಲ್ಲಿ ಪಾರದರ್ಶಕತೆ, ಕಡ್ಡಾಯ ಉತ್ತೀರ್ಣ ಅಂಕ, ತ್ರಿಭಾಷಾ ಸೂತ್ರದ ಮುಂದುವರಿಕೆ ಹಾಗೂ ಶಿಕ್ಷಕರಿಗೆ ಬೋಧನೆಗೆ ಪೂರಕ ವಾತಾವರಣ ಕಲ್ಪಿಸುವ ಮೂಲಕ ಶೈಕ್ಷಣಿಕ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ.**




ಶಿಕ್ಷಣ ಇಲಾಖೆಯು ಈ ಶೈಕ್ಷಣಿಕ ವರ್ಷದಿಂದಲೇ ಜಾರಿಗೆ ತಂದಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸುಧಾರಣೆಯು ಸಿಬಿಎಸ್‌ಸಿ ಕ್ರಮವನ್ನು ಆಧರಿಸಿ ರಚಿಸಿದೆ. ಆದರೆ, ರಾಜ್ಯ ಮಂಡಳಿಯು ನಡೆಸುವ 80 ಅಂಕಗಳ ಪರೀಕ್ಷೆಯಲ್ಲಿ ಉತ್ತೀರ್ಣನಾಗಲು ಪಡೆಯಬೇಕಾದ ಕನಿಷ್ಠ ಅಂಕಗಳೆಷ್ಟು ಎಂಬುದರ ಬಗ್ಗೆ ನಿರ್ದಿಷ್ಟ (ಕನಿಷ್ಟ ಅಂಕಗಳ) ಅಂಕಗಳ ಮಿತಿಯಿಲ್ಲ. ಈ ವಿಚಾರದಲ್ಲಿ ಮಾತ್ರ ಸಿಬಿಎಸ್‌ಸಿ ನಿಯಮವನ್ನು ಅನುಸರಿಸುವಂತೆ ನಿಯಮವಿಲ್ಲ. ಸಿಬಿಎಸ್‌ಸಿ ಪಠ್ಯಕ್ರಮದ 10ನೆಯ ತರಗತಿಯ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು, ಪ್ರತಿ ವಿಷಯದಲ್ಲಿ ಕನಿಷ್ಠ 33% ಅಂಕಗಳನ್ನು ಗಳಿಸಲೇಬೇಕು. 80 ಅಂಕಗಳಿಗೆ ಮಂಡಳಿ ನಡೆಸುವ ಪರೀಕ್ಷೆ ಮತ್ತು 20 ಅಂಕಗಳ– ಆಂತರಿಕ ಮೌಲ್ಯಮಾಪನ– ಎರಡೂ ಸೇರಿ 33 ಅಂಕಗಳನ್ನು ಗಳಿಸಲೇಬೇಕು. ಅಂದರೆ 80ಕ್ಕೆ 26/27, ಆಂತರಿಕ ಮೌಲ್ಯಮಾಪನಕ್ಕೆ 7 ಅಂಕಗಳನ್ನು ಪಡೆಯಲೇಬೇಕು.

ರಾಜ್ಯ ಶಿಕ್ಷಣ ಇಲಾಖೆಯು ಕಳೆದ ಶೈಕ್ಷಣಿಕ ವರ್ಷದಿಂದ ಸುಧಾರಣೆಯಲ್ಲಿ ತಂದಿರುವ ನಪಾಸಾಗುವ ಸಾಧ್ಯತೆ ಕಡಿಮೆ ಎಂದು ಭಾವಿಸಲಾಗುತ್ತಿದೆ. ಶೈಕ್ಷಣಿಕ ಗುಣಮಟ್ಟವನ್ನು ಎತ್ತರಿಸುವ ಒಂದು ರಚನಾತ್ಮಕ ಸುಧಾರಣೆಯಾಗಿ ಈ ಸುಧಾರಣೆ ಕಾಣುವುದಿಲ್ಲ. ಯಾಕೆಂದರೆ, ಕೇವಲ ಉತ್ತೀರ್ಣತೆಯ ಪ್ರಮಾಣವನ್ನು ಏರಿಸುವುದಕ್ಕಾಗಿಯೇ ಜಾರಿಗೆ ತರುವ ಯಾವ ಸುಧಾರಣೆಯೂ ಶೈಕ್ಷಣಿಕ ಪ್ರಗತಿಯೆನಿಸುವುದಿಲ್ಲ. ಅದರ ಬದಲು, ಪರೀಕ್ಷೆ ಬರೆಯುವ ಎಲ್ಲ ವಿದ್ಯಾರ್ಥಿಗಳನ್ನೂ ಪಾಸು ಮಾಡುವುದು ಸರ್ವಶಿಕ್ಷಣ ಸಾಕ್ಷರತಾ ಅಭಿಯಾನಕ್ಕೆ ಸಾರ್ಥಕ್ಯ ತಂದೀತು! ಸರ್ವ ಶಿಕ್ಷಣ ಸಾಕ್ಷರತಾ ಅಭಿಯಾನವನ್ನು ವಾಜಪೇಯಿಯವರು, ಮನಮೋಹನ ಸಿಂಗರು ಕಲಿಕೆಯ ಗುಣಮಟ್ಟದ ವಿಚಾರದಲ್ಲಿ ಪ್ರಶ್ನಿಸಿದ್ದರು. ವಿದ್ಯೆಯೆಂಬುದು ಸಂತೆಯಲ್ಲಿ ಮಾರುವ ನಿತ್ಯ ಬಳಕೆಯ ಸಣ್ಣ ಸಣ್ಣ ಸರಕಿಗಿಂತ ಕೀಳಾಗಬಾರದು. ಕೊಂಡು ತಂದು ಹೊತ್ತು ಮಾರಿ ಲಾಭ ಗಳಿಸಲು ವಿದ್ಯೆಯೇನು ಬಳೆಯ ಮಲಾರವೇ? ಹಾಗಾಗಬಾರದಲ್ಲ. ಶಿಕ್ಷಣ, ಉದ್ಯೋಗ, ನೀತಿ ನಿಯಮಗಳು, ಕಾನೂನು ರಚನೆ ಮತ್ತು ಪಾಲನೆ, ಶ್ರಮಸಂಸ್ಕೃತಿ, ಶ್ರಮಗೌರವ– ಇವುಗಳನ್ನೆಲ್ಲ ವಿದ್ಯೆಯ ಜೊತೆಗೇ ಕೀಳಂದಾಜಿಸಿದ್ದರ ಪರಿಣಾಮವನ್ನು, ಮಕ್ಕಳಿಗೆ ಕಷ್ಟವಾಗುತ್ತದೆ ಅಂತ ನೆಪ ಹೇಳಿಕೊಂಡು ತಂದ ಎಲ್ಲ ಸುಧಾರಣೆಗಳು ಮಕ್ಕಳ ಕಲಿಕೆಯ ಶಕ್ತಿಯನ್ನು, ಬದುಕನ್ನು ಎಲ್ಲಿಗೆ ತಂದು ನಿಲ್ಲಿಸಿದೆ ಎಂಬುದನ್ನು ಪ್ರತ್ಯೇಕವಾಗಿ ವಿವರಿಸಬೇಕಿಲ್ಲ. ಸರಿಯಾಗಿ ಓದಲು, ಬರೆಯಲು, ಮಾತಾಡಲು ಬಾರದ ಮಕ್ಕಳು ಸಮಾಜಕ್ಕೆ ಕಂಟಕರಾಗಿ ಶಾಲೆಯಿಂದ ಪ್ರತಿವರ್ಷ ಹೊರಬರುತ್ತಿದ್ದಾರೆ. ಮುಂದಿನ ತಲೆಮಾರಿಗೆ ರೂಪಿಸಬೇಕಾದ ಶಿಕ್ಷಣ ನೀತಿಗಳು ಬೌದ್ಧಿಕವಾಗಿ, ಸಾಂಸ್ಕೃತಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಶೈಥಿಲ್ಯಗೊಂಡರೆ ದೇಶದ ಭವಿಷ್ಯ ಏನಾದೀತು? ಯಾರು ಹೊಣೆ? ಹೊಲಸು ಅಧಿಕಾರ ರಾಜಕೀಯದ ಪರಮಾವಧಿಯಲ್ಲಿ ಅಕ್ಷರಸ್ಥರ ಪ್ರಮಾಣವನ್ನು ಕೇವಲ ಪಾಸು ಮಾಡುವುದರಿಂದ ಹೆಚ್ಚಿಸುವುದರಿಂದ ಆಗುವ ಸಾಧನೆಯಾದರೂ ಏನು?

ಈಗಿರುವ ಪದ್ಧತಿಯನ್ನು ಸ್ವಲ್ಪ ಬದಲಾಯಿಸಿ ಹೀಗೊಂದು ಸುಧಾರಣೆಯನ್ನು ಮಾಡಬಹುದು. ಒಂದು ಶೈಕ್ಷಣಿಕ ವರ್ಷದಲ್ಲಿ ಮೂರು ಭಾಷೆಗಳು (ತ್ರಿಭಾಷಾ ಸೂತ್ರವನ್ನು ಮುಂದುವರೆಸಬೇಕು. ಯಾಕೆಂದರೆ, ಶಿಕ್ಷಣ ಆಯೋಗವು 1964–66 ರಲ್ಲಿ ಮೊದಲ ಬಾರಿಗೆ ತ್ರಿಭಾಷಾ ಸೂತ್ರವನ್ನು ಪ್ರಸ್ತಾಪಿಸಿತ್ತು. ಇದೇ ಕೊಠಾರಿ ಆಯೋಗ. ಶ್ರೀಮತಿ ಇಂದಿರಾಗಾಂಧಿಯವರ ನೇತೃತ್ವದಲ್ಲಿ 1968ರ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಇದನ್ನು ಅಳವಡಿಸಲಾಯಿತು. ಭಾಷಾ ವೈವಿಧ್ಯತೆ ಮತ್ತು ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸುವ ಸಲುವಾಗಿ ರಾಜೀವ್ ಗಾಂಧಿ ಸರ್ಕಾರ 1986ರ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಇದನ್ನು ಪುನರುಚ್ಚರಿಸಿತ್ತು.

1992ರಲ್ಲಿ ನರಸಿಂಹರಾವ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಇದನ್ನು ಪರಿಷ್ಕರಿಸಿತ್ತು. ಬಹುಭಾಷಾ ಸಂಸ್ಕೃತಿಯನ್ನು ಉತ್ತೇಜಿಸಲು ಶಾಲಾ ಮಟ್ಟದಿಂದಲೇ ತ್ರಿಭಾಷಾ ಸೂತ್ರವನ್ನು ರಾಷ್ಟ್ರೀಯ ಶಿಕ್ಷಣ ನೀತಿ ಪ್ರಸ್ತಾಪಿಸುತ್ತದೆ. ಸಾಂವಿಧಾನಿಕ ನಿಬಂಧನೆ, ಜನರ ಆಕಾಂಕ್ಷೆ, ಪ್ರಾಂತ್ಯ ಮತ್ತು ಒಕ್ಕೂಟದ ಅಗತ್ಯತೆ ಗಮನದಲ್ಲಿಟ್ಟುಕೊಂಡು ಬಹುಭಾಷಾ ಸಂಸ್ಕೃತಿ ಮತ್ತು ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸಲು ತ್ರಿಭಾಷಾ ಸೂತ್ರವನ್ನು ಎನ್ ಇಪಿ ತನ್ನ ದಾಖಲೆಯಲ್ಲಿ ಹೇಳಿದೆ. ತ್ರಿಭಾಷಾ ಸೂತ್ರದಲ್ಲಿ ರಾಜ್ಯಗಳ ಮೇಲೆ ಯಾವುದೇ ಒತ್ತಡವಿಲ್ಲ. ಈ ಮೂರರಲ್ಲಿ ಕನಿಷ್ಠ ಎರಡು ಭಾಷೆಗಳು ಭಾರತದ ಸ್ಥಳೀಯ ಭಾಷೆಗಳಾಗಿರಬೇಕು. ಅದು ದೇಶೀಭಾಷೆಗಳಾಗಿರಬೇಕು. ಸಂಸ್ಕೃತ, ಹಿಂದಿ ಅಥವಾ ಯಾವುದೇ ಇರಲಿ. ಅದು ರಾಜ್ಯಗಳಿಗೆ ಸಂಬಂಧಿಸಿದ್ದು. ಕರ್ನಾಟಕದಲ್ಲಿ ಮೊದಲಿಂದಲೂ ಇದ್ದದ್ದು ತ್ರಿಭಾಷಾ ಸೂತ್ರದ ವ್ಯವಸ್ಥೆಯೇ ಆಗಿದೆ. ಈ ಪದ್ಧತಿಯಲ್ಲೇ ಅಲ್ಲವೆ ಇಷ್ಟು ಸುದೀರ್ಘ ವರ್ಷಗಳ ಶಿಕ್ಷಣ ನೀತಿಯಲ್ಲಿ ಅತ್ಯಂತ ಮೇಧಾವಿ ಸಾಹಿತಿಗಳು, ತಂತ್ರಜ್ಞರು, ವಿಜ್ಞಾನಿಗಳು, ಪತ್ರಕರ್ತರು, ಪ್ರಾಧ್ಯಾಪಕರು, ಚಿಂತಕರು, ವಿದ್ವಾಂಸರು, ಶಿಕ್ಷಣ ತಜ್ಞರು, ಇತಿಹಾಸಕಾರರು, ಸಂಶೋಧಕರು, ರಾಜಕಾರಣಿಗಳು ಹಾಗೂ ಇನ್ನಿತರ ಕ್ಷೇತ್ರಗಳ ಸಾಧಕರು ರೂಪುಗೊಂಡದ್ದು. ಈ ಹಿನ್ನೆಲೆಯಲ್ಲಿ ತ್ರಿಭಾಷಾ ಸೂತ್ರವನ್ನು ತೆಗೆಯುವುದು ಸಮರ್ಥನೀಯವೂ ಅಲ್ಲ, ಸೂಕ್ತವೂ ಅಲ್ಲ. ರಾಜಕೀಯ ಬೇರೆ, ಶಿಕ್ಷಣ ಬೇರೆ. ರಾಜಕೀಯದಲ್ಲಿ ಶಿಕ್ಷಣವಿರಲಿ. ಆದರೆ, ಶಿಕ್ಷಣದಲ್ಲಿ ರಾಜಕೀಯ ಬೇಡ) ಮತ್ತು ಕೋರ್ ವಿಷಯಗಳನ್ನೊಳಗೊಂಡು ನಾಲ್ಕು ಕಿರುಪರೀಕ್ಷೆಯನ್ನು 25 ಅಂಕಗಳಿಗೆ ಮಾಡುವುದು. ಇವುಗಳ ಜೊತೆಯಲ್ಲಿ ಕ್ರೀಡೆ ಮತ್ತು ಕಂಪ್ಯೂಟರನ್ನು ವಿಷಯವನ್ನು ಸೇರಿಸುವುದು. ಒಂದು ಕಿರುಪರೀಕ್ಷೆಗೆ ಒಟ್ಟೂ 200 ಅಂಕಗಳು. (25x8=200) ಹೀಗೆ ನಾಲ್ಕು ಪರೀಕ್ಷೆಗಳ ಒಟ್ಟೂ ಅಂಕಗಳು 800. ಆರು ವಿಷಯಗಳಲ್ಲಿ ತಲಾ 100 ಅಂಕಗಳಿಗೆ, ಥಿಯರಿ ಮತ್ತು ಪ್ರಾಕ್ಟಿಕಲ್ ಸೇರಿ ಕ್ರೀಡೆ ಮತ್ತು ಕಂಪ್ಯೂಟರಲ್ಲಿ 50 ಅಂಕಗಳಿಗೆ ಮಧ್ಯವಾರ್ಷಿಕ ಪರೀಕ್ಷೆಯನ್ನು ಮಾಡುವುದು. ನಾಲ್ಕು ಕಿರುಪರೀಕ್ಷೆಗಳ ಅಂಕಗಳು 800. ಮಧ್ಯವಾರ್ಷಿಕ ಪರೀಕ್ಷೆಯ ಅಂಕಗಳು 700. ಒಟ್ಟೂ (800+600+100) ಅಂಕಗಳು 1500. ಈ 1500 ಅಂಕಗಳನ್ನು 25ಕ್ಕೆ ಪರಿವರ್ತಿಸುವುದು.

ಇದನ್ನೇ ಆಂತರಿಕ ಮೌಲ್ಯಮಾಪನದ ಅಂಕಗಳೆಂದು ಪರಿಗಣಿಸಿ ವಾರ್ಷಿಕ ಪರೀಕ್ಷೆಯಲ್ಲಿ 600 ಅಂಕಗಳಿಗೆ ಪಡೆದ ಅಂಕಗಳಿಗೆ ಸೇರಿಸುವುದು. ಅಲ್ಲಿಗೆ ಒಟ್ಟೂ 625 ಅಂಕಗಳು. ಮೂರು ಭಾಷೆಗಳನ್ನು ಪ್ರಥಮ, ದ್ವಿತೀಯ, ತೃತೀಯ ಅಂತ ವರ್ಗೀಕರಿಸುವುದನ್ನು ಕೈಬಿಡುವುದೊಳಿತು.

ಮುಖ್ಯವಾಗಿ, ಈ ವಿಧಾನದಲ್ಲಿ ಆಂತರಿಕ ಅಂಕವನ್ನು ಕೊಡುವಲ್ಲಿ ಶಿಕ್ಷಕರು ಪಕ್ಷಪಾತ ಮಾಡಿದರೆಂದು ಆರೋಪಿಸುವುದಕ್ಕೆ ಅವಕಾಶವಿರುವುದಿಲ್ಲ. ಪ್ರಾಜೆಕ್ಟು ಅದು ಇದು ಅಂತ ಮಕ್ಕಳಿಗೆ ಖರ್ಚೂ ಇರುವುದಿಲ್ಲ. ಎಲ್ಲ ಪರೀಕ್ಷೆಗಳಲ್ಲೂ ಪಡೆದ ಅಂಕಗಳೇ ಒಟ್ಟೂ ಫಲಿತಾಂಶದ ಮೇಲೆ ಪರಿಣಾಮವನ್ನು ಬೀರುವುದರಿಂದ ವಿದ್ಯಾರ್ಥಿಗಳು ಯಾವ ಪರೀಕ್ಷೆಯನ್ನೂ ನಿರ್ಲಕ್ಷ್ಯ ಮಾಡುವಂತಿಲ್ಲ. ಹಾಗಂತ, ಪಾಸಾಗಲು ವಾರ್ಷಿಕ ಪರೀಕ್ಷೆಯಲ್ಲಿ ಪ್ರತಿ ವಿಷಯದಲ್ಲಿ 35 ಅಂಕಗಳನ್ನು ವಿದ್ಯಾರ್ಥಿ ಪಡೆಯಲೇಬೇಕು ಎಂಬ ಮೊದಲಿದ್ದ ನಿಯಮವನ್ನೇ ಕಡ್ಡಾಯಗೊಳಿಸಬೇಕು. ಈ 35 ಅಂಕಗಳಲ್ಲಿ ಆಂತರಿಕ ಮೌಲ್ಯಮಾಪನದಲ್ಲಿ ಕನಿಷ್ಠ 7 ಅಂಕಗಳನ್ನು ಮತ್ತು ಮಂಡಳಿ ನಡೆಸುವ ವಾರ್ಷಿಕ ಪರೀಕ್ಷೆಯಲ್ಲಿ 28 ಅಂಕಗಳನ್ನು ಪಡೆಯಲೇಬೇಕು ಎಂಬುದು ಕಡ್ಡಾಯವಾಗಬೇಕು. ಇದರಲ್ಲಿ ಯಾವುದೇ ಹೊಂದಾಣಿಕೆಯನ್ನು ಯಾವ ಹಂತದಲ್ಲೂ ಮಾಡಬಾರದು. ಆಂತರಿಕ ಮೌಲ್ಯಮಾಪನವನ್ನು ಮಾರ್ಚ್ ಹತ್ತರೊಳಗೆ ಬೋರ್ಡಿಗೆ ಕಳುಹಿಸುವಂತೆ ನಿಯಮವನ್ನು, ಹಾಗೆ ಕಳಿಸುವ ಮೊದಲು ಇಲಾಖೆಯಿಂದ ಕಟ್ಟುನಿಟ್ಟಾದ ತಪಾಸಣೆಯಾಗಿರಬೇಕು. ಬೇಕಾಬಿಟ್ಟಿ ಅಂಕಗಳ ವಿತರಣೆಯನ್ನು ತಡೆಯಬೇಕು. ಕಲಿಕೆಯ ನಿಯಮದಲ್ಲಿ ಔದಾರ್ಯ ಮತ್ತು ಶೈಥಿಲ್ಯವಿದ್ದಾಗ ಬೋಧನೆಯ ಜೊತೆಗೆ ಕಲಿಕೆಯ ಗುಣಮಟ್ಟವೂ ಕುಸಿದಿದ್ದರಿಂದ ಇಂದಿನ ಶಿಕ್ಷಣ ವ್ಯವಸ್ಥೆ ಹದಗೆಟ್ಟಿದೆ!

ತರಗತಿ ಬೋಧನೆ ಮತ್ತು ಶೈಕ್ಷಣಿಕ ಕಾರ್ಯಗಳನ್ನು ಹೊರತುಪಡಿಸಿ ಇತರ ಕಾರ್ಯಗಳಿಗೆ ಶಿಕ್ಷಕರನ್ನು ವಿನಿಯೋಗಿಸಬಾರದು. ಮುಖ್ಯವಾಗಿ, ಅಧಿಕಾರ, ಶೋಷಣೆ, ದರ್ಪ, ಬಾಸಿಸಂ, ಫೇವರಿಸಂ, ಜಾತೀಯತೆ, ಸ್ವಜನ ಪಕ್ಷಪಾತ, ಗುಂಪುಗಾರಿಕೆ, ಅವ್ಯವಸ್ಥೆಗಳು ಶಾಲಾ ಮಟ್ಟದಿಂದ ವಿಧಾನಸೌಧದವರೆಗೂ ಕೊನೆಯಾಗದಿದ್ದರೆ ಶಾಲೆಗಳು ರಾಜಕೀಯದ ಆಡುಂಬೊಲವಾಗಿ ರಾಜಕೀಯದ ಅಜೆಂಡಾವನ್ನು ಸಾಧಿಸುವ ತಾಣಗಳಾಗುತ್ತವೆ. ಶಾಲಾಭಿವೃದ್ಧಿ ಕಮಿಟಿ ತನಗೆ ಬೇಕಾದಂತೆ ನಿಯಂತ್ರಿಸುವ ಸರಕಾಗಿ ಶಾಲೆಗಳು ಬದಲಾಗಬಾರದು. ಪಾಠಬೋಧನೆಗಿಂತ ಇತರ ಕೆಲಸ ಕಾರ್ಯಗಳೇ ಹೆಚ್ಚಾದಾಗ ಶಿಕ್ಷಕರ ಬೌದ್ಧಿಕ ಕಸುವು, ವೈಚಾರಿಕತೆ, ಮಾನಸಿಕ ಕ್ಷಮತೆ ಕ್ಷೀಣಿಸುತ್ತದೆ. ಆಗ ಮನಃಸ್ಥಿತಿ ಮತ್ತು ನೈತಿಕ ಧೋರಣೆ ಬದಲಾಗುತ್ತದೆ. ಶಿಕ್ಷಕರು ಮುಖ್ಯ ಶಿಕ್ಷಕರ ಮತ್ತು ಮೇಲಧಿಕಾರಿಗಳ ಬಾಲಬಡುಕರಾಗುತ್ತಾರೆ. ಅಭಿರುಚಿ, ಬೋಧನಾ ಸಾಮರ್ಥ್ಯ, ಸೃಜನಶೀಲತೆ, ಪ್ರತಿಭೆ, ವೃತ್ತಿಬದ್ಧತೆ, ಸಮಷ್ಟಿ ಚಿಂತನೆ, ಸಮನ್ವಯ ಮತ್ತು ಸಾಮರಸ್ಯ ಗುಣವನ್ನು ಪ್ರಧಾನವಾಗಿ ಗಮನದಲ್ಲಿರಿಸಿಯೇ ಶಿಕ್ಷಕರ ಮೌಲ್ಯಮಾಪನವನ್ನು ಎಲ್ಲ ಸ್ತರಗಳಲ್ಲೂ ಮಾಡಬೇಕು. ಅದನ್ನು ಬಿಟ್ಟು ಜಾತಿ, ಪಕ್ಷದ ಹಿನ್ನೆಲೆಯಲ್ಲಿ ಮೌಲ್ಯಮಾಪನ ಸರಿಯಲ್ಲ. ಯಾಕೆಂದರೆ, ಪ್ರಭುತ್ವ ಲೊಳಲೊಟ್ಟೆಯಾದರೆ ಶಿಕ್ಷಣದ ಗುಣಮಟ್ಟ ಕುಸಿಯುತ್ತದೆ.

ಒಂದು ಜನಾಂಗದ ಭವಿಷ್ಯವನ್ನೇ ಗುಡಿಸಿ ಗುಂಡಾಂತರ ಮಾಡಿಬಿಡುವ ಶಕ್ತಿ ಸರ್ಕಾರಕ್ಕಿದೆ. ಸರ್ಕಾರದ ನಿಯಮಗಳು ದೇಶದ ಭವಿಷ್ಯದ ದೃಷ್ಟಿಯಿಂದ ಮಾರಕವಾಗಬಾರದು. ಸರ್ಕಾರಗಳು ಬರುತ್ತವೆ, ಹೋಗುತ್ತವೆ. ಶೈಕ್ಷಣಿಕ ಚಿಂತನೆಗಳು ಆಯಾ ಕಾಲಕ್ಕೆ ಬದಲಾಗುತ್ತಲೇ ಇರಬೇಕು. ಆದರೆ ಭವಿಷ್ಯದ ಪ್ರಜೆಗಳಾದ ಇಂದಿನ ಮಕ್ಕಳಿಗೆ ನಾವು ನೀಡುವ ಶಿಕ್ಷಣ ಅವರ ಬದುಕನ್ನೇ ಮೂರಾಬಟ್ಟೆಯಾಗಿಸಬಾರದೆಂಬ ಎಚ್ಚರ ಸರ್ಕಾರಗಳಿಗೆ, ಶಿಕ್ಷಣ ಚಿಂತಕರಿಗೆ, ಪೋಷಕರಿಗೆ ಇರಬೇಕು. ಕಲಿಕೆಯಲ್ಲಿ ತೀರಾ ಹಿಂದುಳಿದ ಮಕ್ಕಳನ್ನು ಫೇಲು ಮಾಡುವ ಶಕ್ತಿ ಅಧ್ಯಾಪಕರಿಗೆ ಇಲ್ಲವಾದರೆ ಅಂಥ ಮಕ್ಕಳು ಅಧ್ಯಾಪಕರ ಮಾತುಗಳನ್ನು ಕೇಳುವುದು ಸಾಧ್ಯವೆ? ಮಕ್ಕಳ ಮೇಲೆ ನಿಯಂತ್ರಣವೇ ಇಲ್ಲವಾದರೆ ಅವರ ವರ್ತನೆಗಳಲ್ಲಿ ಅನಪೇಕ್ಷಣೀಯ ಪರಿವರ್ತನೆಗಳು ಹುಟ್ಟುವುದು ಸಹಜ.

ಅಧ್ಯಾಪಕರ ನಿಯಂತ್ರಣವಿಲ್ಲದ ಮಕ್ಕಳು ಪೋಷಕರಿಗೂ ಹೆದರದೆ ಅವರನ್ನೇ ಬ್ಲ್ಯಾಕ್ ಮೇಲ್ ಮಾಡುತ್ತಾರೆ. ಕೊನೆಗೆ ಮಕ್ಕಳು ಹೇಳಿದ್ದನ್ನೇ ಪೋಷಕರು ಕೇಳುವ ಪರಿಸ್ಥಿತಿ ಬರುತ್ತದೆ. ತಮಗೆ ಬೇಕಾದಂತೆ ವಿಷಯವನ್ನು ತಿರುಚುವ ಹಂತವನ್ನು ಮಕ್ಕಳು ತಲುಪುತ್ತಾರೆ. ಸಿಸಿಇ ಪದ್ಧತಿಯ ಕಲಿಕೆಯಲ್ಲಿ ಆಂತರಿಕ ಅಂಕಗಳಿಗಾಗಿ ಶಿಕ್ಷಕರಿಗೆ ಮಸ್ಕಾ ಹೊಡೆಯುವ ಬುದ್ಧಿ ಮಕ್ಕಳಲ್ಲಿ ಬೆಳೆದುಬಿಟ್ಟಿದೆ. ಶಿಕ್ಷಕರಿಗೆ ಬೇಕುಬೇಕಾದುದನ್ನು ಒದಗಿಸುವ ಪೋಷಕರಿರಬಹುದು. ಅಂಕಗಳನ್ನು ಪಡೆಯುವುದಕ್ಕೆ ಇದು ಸುಲಭ ದಾರಿಯಾಗಿರುವುದರಿಂದ ಮಕ್ಕಳಿಗಿಂತ ಅವರ ಪೋಷಕರೇ ಹೆಚ್ಚು ಚಟುವಟಿಕೆಯಿಂದಿರುವಂತೆ ಸಿಸಿಇ ಪ್ರೇರಣೆಯಾಗಿದೆ. ಶಿಕ್ಷಕರು ಆಂತರಿಕ ಅಂಕಗಳಿಗೆ ಮಕ್ಕಳನ್ನು ಬ್ಲ್ಯಾಕ್ ಮೇಲ್ ಮಾಡಬಹುದು.

ಹೆದರಿಸಿ ಸ್ವಾರ್ಥಕ್ಕೆ ಬಳಸಿಕೊಳ್ಳಬಹುದು. ಇದೆಲ್ಲ ಕಲಿಕೆ ಮತ್ತು ಬೋಧನೆಯ ಮೇಲೆ ಪರಿಣಾಮ ಬೀರುತ್ತದೆ. ಅತ್ಯುತ್ತಮವಾದ ರೀತಿಯಲ್ಲಿ ಸಿಸಿಇ ಪದ್ಧತಿಯನ್ನು ಅಳವಡಿಸಿಕೊಂಡ ಅನೇಕ ಶಾಲೆಗಳಿವೆ. ಅಪೇಕ್ಷಿತವಾದ ಫಲಿತಾಂಶವನ್ನೂ ಪಡೆದಿವೆ. ಮಕ್ಕಳ ಕಲಿಕೆಯಲ್ಲಿ ಅವರ ಪ್ರತಿಭೆಯನ್ನು ಹೊರತರಲು ಈ ಪದ್ಧತಿಯನ್ನು ಹೊಸವಿನ್ಯಾಸದಲ್ಲಿ ರಚನಾತ್ಮಕವಾಗಿ ರೂಪಿಸುವುದುತ್ತಮ. ಆದರೆ ಆಂತರಿಕ ಅಂಕಗಳಿಗೆ ಅದನ್ನು ಅಳವಡಿಸುವುದು ಶೈಕ್ಷಣಿಕ ಪ್ರಗತಿಗೆ ಪೂರಕವಲ್ಲ.

ಎಸ್ಸೆಸ್ಸೆಲ್ಸಿಯಲ್ಲಿ ಅತಿ ಹೆಚ್ಚು ಫಲಿತಾಂಶ ನಮ್ಮ ಅವಧಿಯಲ್ಲಿ ದಾಖಲೆಯಾಯಿತು ಎಂಬ ದೊಡ್ಡಸ್ಥಿಕೆಗಾಗಿ

ಬಲಿ ತೆಗೆದುಕೊಳ್ಳುವುದು ಅಂದರೆ, ವಿಷಯ ಶಿಕ್ಷಕರೇ ಇಲ್ಲದೆ ಪಠ್ಯಬೋಧನೆ, ಎಲ್ಲ ಪಠ್ಯಗಳ ಪ್ರಶ್ನಾಕೋಶಿಯನ್ನು ಸಿದ್ಧಪಡಿಸಿ ಅದರಿಂದಲೇ ಪ್ರಶ್ನೆಗಳನ್ನು ಕೇಳುವುದು, ಪ್ರಶ್ನೆಪತ್ರಿಕೆಯ ನೀಲನಕ್ಷೆಯನ್ನು ನೀಡುವುದು, ಸುಲಭದ ಪ್ರಶ್ನೆಪತ್ರಿಕೆ ವಿನ್ಯಾಸ, ಒತ್ತಡದ ಉದಾರವಾದ ಮೌಲ್ಯಮಾಪನ– ಇವೆಲ್ಲವನ್ನು ನಿಲ್ಲಿಸಬೇಕು.

ದಾಖಲೆಯ ಫಲಿತಾಂಶದ ದುರಾಸೆಯನ್ನು ಬಿಟ್ಟು ಉತ್ತಮ ತರಗತಿ ಬೋಧನೆ, ಕಲಿಕೆ, ಪರೀಕ್ಷಾಕ್ರಮ ಸರಿಯಾಗುವಂತೆ ಕಟ್ಟುನಿಟ್ಟಾಗಿ ನಿಯಮಗಳನ್ನು ಜಾರಿಗೊಳಿಸಿದರೆ ಸಹಜವಾಗಿಯೇ ವ್ಯವಸ್ಥೆಯ ಬಗ್ಗೆ ಜನರಲ್ಲಿ ನಂಬಿಕೆ ಹುಟ್ಟುತ್ತದೆ. ಸರ್ಕಾರಿ ಶಾಲೆಗಳು ಬಲಗೊಳ್ಳುತ್ತದೆ.



**ಬೆಂಗಳೂರಿನ ತ್ಯಾಗರಾಜ ನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ, ಶ್ರೀ ರಾಘವೇಂದ್ರ ಸ್ವಾಮಿಗಳ 355 ನೇ ಆರಾಧನೆ ಪ್ರಯುಕ್ತ ಮಂಗಳವಾರ ಬಸವನಗುಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಲ್.ಎ. ರವಿ ಸುಬ್ರಹ್ಮಣ್ಯ ಭಾಗವಹಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಆಶೀರ್ವಾದ ಪಡೆದರು, ತ್ಯಾಗರಾಜ ನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಒಂದು ವರ್ಷದಿಂದ ಹಲವಾರು ನೂತನ ಕಾರ್ಯಕ್ರಮಗಳನ್ನು ಅಯೋಜಿಸುವ ಮುಖಾಂತರ ಹೊಸ ಆಡಳಿತ ಮಂಡಳಿಯು ಅನಿಲ್ ನವರತ್ನ ನೇತೃತ್ವದಲ್ಲಿ ಮಠವನ್ನು ಅತ್ಯಂತ ಯಶಸ್ವಿಯಾಗಿ ಅಭಿವೃದ್ಧಿ ಪಡಿಸಿ ವಿವಿಧ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಿ ಈ ಭಾಗದಲ್ಲಿ ಸನಾತನ ಧರ್ಮಕ್ಕೆ ಹೆಚ್ಚಿನ ಕೊಡುಗೆ ನೀಡುತ್ತಿದ್ದಾರೆ ಎಂದು ಹೇಳಿದರು, ಈ ಸಂಧರ್ಭದಲ್ಲಿ ಮಠದ ಟ್ರಸ್ಟ್ ನ ಅಧ್ಯಕ್ಷರಾದ ಅನಿಲ್ ನವರತ್ನ ಶಾಸಕರನ್ನು ಮಠದ ಪರವಾಗಿ ಗೌರವಿಸಿದರು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಪ್ರತಿನಿಧಿ ಕೆ.ಸತೀಶ್ ಉರಾಳ್, ಬಸವನಗುಡಿ ಬ್ರಾಹ್ಮಣ ಮಹಾಸಭಾದ ಪ್ರಧಾನ ಕಾರ್ಯದರ್ಶಿ ರಥಯಾತ್ರೆಸುರೇಶ್, ಸಹ ಕಾರ್ಯದರ್ಶಿ ಬಿ.ಎಸ್. ಸುರೇಶ್, ಯುವ ವಿಭಾಗದ ಸಹ ಕಾರ್ಯದರ್ಶಿ ಎಸ್.ಎಸ್. ಅನಿರುದ್ಧ. ಹಾಗೂ ಒಬಿಸಿ ಬಸವನಗುಡಿ ಮಂಡಲ ಅಧ್ಯಕ್ಷರಾದ ಷಣ್ಮುಗಂ ಹಾಗೂ ಮಠದ ಸಿಬ್ಬಂದಿ ಹಾಜರಿದ್ದರು.**

## ನಾಳೆ ಬೆಂಗಳೂರಿನಲ್ಲಿ 'ದಿಮಾಗಿ ನಕ್ಸಲಿಸಂ'

# ಕುರಿತು ಜಾಗೃತಿ ಮಂಥನ

● ವಿಕ್ರಮ ವಾಹಿನಿ | ಬೆಂಗಳೂರು

ದೇಶದ ಆಂತರಿಕ ಭದ್ರತೆ ಹಾಗೂ ಸಾಮಾಜಿಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತಿರುವ ವೈಚಾರಿಕ ಚಟುವಟಿಕೆಗಳ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ಹಿಂದೂ ಜನಜಾಗೃತಿ ಸಮಿತಿಯ ಆಶ್ರಯದಲ್ಲಿ ಸೆಪ್ಟೆಂಬರ್ 3ರಂದು ಬೆಂಗಳೂರಿನಲ್ಲಿ ವಿಶೇಷ ವಿಚಾರ ಸಂಕಿರಣ ಆಯೋಜಿಸಲಾಗಿದೆ.

ವಿ.ವಿ.ಪುರಂನ ಮಾನಂದಿ ನಂಜುಂಡ ಶೆಟ್ಟಿ ಸಭಾಂಗಣದಲ್ಲಿ ಸಂಜೆ 5.30ಕ್ಕೆ ನಡೆಯಲಿರುವ ಕಾರ್ಯಕ್ರಮದಲ್ಲಿ 'ಅಎಕ ಆಂದೋಲನದ ಹಿಂದೆ ದಿಮಾಗಿ ನಕ್ಸಲಿಸಂ ಕೈವಾಡವೇ?' ಎಂಬ ವಿಷಯದ ಕುರಿತು ಚರ್ಚೆ ನಡೆಯಲಿದೆ. ಶಿಕ್ಷಣ ಸಂಸ್ಥೆಗಳು ಹಾಗೂ ನ್ಯಾಯಾಂಗ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಪ್ರಯತ್ನಗಳು ಮತ್ತು ಇತ್ತೀಚಿನ ವಿದ್ಯಾರ್ಥಿ ಚಳುವಳಿಗಳ ಹಿನ್ನೆಲೆಯ ಕುರಿತು ವಿಚಾರ ವಿನಿಮಯ ನಡೆಯಲಿದೆ ಎಂದು ಸಮಿತಿ ತಿಳಿಸಿದೆ.

ಯುವ ಬ್ರಿಗೇಡ್‌ನ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಹಾಗೂ ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರ ಮೋಹನ್ ಗೌಡ ಅವರು ವಿಚಾರ ಸಂಕಿರಣದಲ್ಲಿ ಮಾತನಾಡಲಿದ್ದಾರೆ.

ವಿ.ವಿ.ಪುರಂನ ವಾಸವಿ ದೇವಸ್ಥಾನ ರಸ್ತೆಯಲ್ಲಿರುವ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ನಾಗರಿಕರು ಹಾಗೂ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಮಿತಿ ಮನವಿ ಮಾಡಿದೆ.

ಕಾರ್ಯಕ್ರಮದಲ್ಲಿ 'ದಿಮಾಗಿ ನಕ್ಸಲಿಸಂ' ಎಂಬ ಪರಿಕಲ್ಪನೆ, ಅದರ ಸಾಮಾಜಿಕ ಹಾಗೂ ಶೈಕ್ಷಣಿಕ ಪರಿಣಾಮಗಳು ಮತ್ತು ಯುವಜನರ ಮೇಲೆ ಬೀರುತ್ತಿರುವ ಪ್ರಭಾವದ ಕುರಿತು ಚರ್ಚೆ ನಡೆಯಲಿದೆ.

# ಹ್ಯೂಸ್ಟನ್‌ನಲ್ಲಿ ವೈಭವದಿಂದ ನಡೆದ ಶ್ರೀ ರಾಯರ 355ನೇ ಆರಾಧನಾ ಮಹೋತ್ಸವ

● ವಿಕ್ರಮ ವಾಹಿನಿ | ಹ್ಯೂಸ್ಟನ್, ಟೆಕ್ಸಾಸ್

ಅಮೆರಿಕದ ಹ್ಯೂಸ್ಟನ್ ಮಹಾನಗರ ಪ್ರದೇಶದ ಶುಗರ್‌ಲ್ಯಾಂಡ್ ಸಮೀಪದ ಶ್ರೀಕೃಷ್ಣ ವೃಂದಾವನದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವವನ್ನು ಭಕ್ತಿ, ವೈಭವ ಹಾಗೂ ಸಾಂಸ್ಕೃತಿಕ ಸಂಭ್ರಮದೊಂದಿಗೆ ಆಚರಿಸಲಾಯಿತು. ಮೂರು ದಿನಗಳ ಈ ಧಾರ್ಮಿಕ ಮಹೋತ್ಸವದಲ್ಲಿ ಟೆಕ್ಸಾಸ್ ಸೇರಿದಂತೆ ಉತ್ತರ ಅಮೆರಿಕದ ವಿವಿಧ ಭಾಗಗಳಿಂದ 1500ಕ್ಕೂ ಅಧಿಕ ಭಕ್ತರು ಪಾಲ್ಗೊಂಡರು.

ಕಳೆದ 15 ವರ್ಷಗಳಿಂದ ಹ್ಯೂಸ್ಟನ್‌ನ ಭಾರತೀಯ ಸಮುದಾಯದ ಸಹಕಾರದಲ್ಲಿ ನಿರಂತರವಾಗಿ ನಡೆಯುತ್ತಿರುವ ಈ ಮಹೋತ್ಸವವು ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನೆಗೆ ಸಮರ್ಪಿತವಾಗಿದೆ.

ಉಡುಪಿ ಶ್ರೀ ಪುತ್ತಿಗೆ ಮಠದ ಪರಮಪೂಜ್ಯ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿಯವರ ಆಶೀರ್ವಾದದೊಂದಿಗೆ ಶ್ರೀಕೃಷ್ಣ ವೃಂದಾವನದಲ್ಲಿ ಆರಾಧನಾ ಮಹೋತ್ಸವವನ್ನು ಪ್ರತಿವರ್ಷವೂ ಶ್ರದ್ಧೆಯಿಂದ ಆಚರಿಸಲಾಗುತ್ತಿದೆ.

ಆಗಸ್ಟ್ 29ರಂದು ನಡೆದ ಮುಖ್ಯ ಆರಾಧನಾ ದಿನದಂದು ಮಹಾ ಸಂಕಲ್ಪ, ಪಾದಪೂಜೆ, ಪಂಚಾಮೃತಾಭಿಷೇಕ, ಕನಕಾಭಿಷೇಕ, ಹಸ್ತೋದಕ ಸೇರಿದಂತೆ ವಿವಿಧ ವೈದಿಕ ಹಾಗೂ ಧಾರ್ಮಿಕ



ಕಾರ್ಯಕ್ರಮಗಳು ನೆರವೇರಿದವು. ಸಂಸ್ಕೃತ ವಿದ್ವಾಂಸರ ವೇದಘೋಷ, ಭಜನೆಗಳು, ಸ್ತೋತ್ರಗಳು ಮತ್ತು ವಿಶೇಷ ಪುಷ್ಪಾಲಂಕಾರಗಳಿಂದ ದೇವಸ್ಥಾನವು ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು. ಪ್ರಧಾನ ಅರ್ಚಕರಾದ ವಿದ್ವಾನ್ ಶ್ರೀ ರಘುರಾಮ ಭಟ್ಟರು ಶಾಸ್ತ್ರೋಕ್ತವಾಗಿ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು.

ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳಿಗೆ ವಿದ್ವಾನ್ ಶ್ರೀ ರಘುರಾಮ್ ಜಿಯವರ ಮಾರ್ಗದರ್ಶನ ಪ್ರಮುಖ ಆಕರ್ಷಣೆಯಾಗಿತ್ತು.

ಮೂರು ದಿನಗಳ ವಿವಿಧ ಪೂಜಾ ವಿಧಿವಿಧಾನಗಳನ್ನು ಶ್ರದ್ಧೆಯಿಂದ ಮುನ್ನಡೆಸಿದ ಅವರು ತಮ್ಮ ವೈದಿಕ ಜ್ಞಾನ ಹಾಗೂ ಆಧ್ಯಾತ್ಮಿಕ ಮಾರ್ಗದರ್ಶನದಿಂದ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದರು.

ಮಧ್ಯಾಹ್ನ ನಡೆದ ಮಹಾ ಪ್ರಸಾದ ಹಾಗೂ ಮಹಾ ಅನ್ನದಾನದಲ್ಲಿ 1500ಕ್ಕೂ ಅಧಿಕ ಭಕ್ತರು ಪಾಲ್ಗೊಂಡರು. ಸ್ಥಳೀಯ ಸ್ವಯಂಸೇವಕರು ಶಿಸ್ತುಬದ್ಧವಾಗಿ ಹಾಗೂ ನಿಸ್ವಾರ್ಥವಾಗಿ ಸಲ್ಲಿಸಿದ ಸೇವೆ ಗಮನ ಸೆಳೆಯಿತು. ಹ್ಯೂಸ್ಟನ್ ಕರ್ನಾಟಕ ಸಂಘದ ಸ್ವಯಂಸೇವಕರೂ ವಿವಿಧ ಸೇವಾ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡರು.

ಮಹೋತ್ಸವದ ಅಂಗವಾಗಿ ನಡೆದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವೂ ವಿಶೇಷ ಮೆಚ್ಚುಗೆಗೆ ಪಾತ್ರವಾಯಿತು. ಪಂಡಿತ ವಿದ್ವಾನ್ ಬಾಲಚಂದ್ರ ಪ್ರಭು ಹಾಗೂ ಸಹ ಕಲಾವಿದರು ಶ್ರೀಕೃಷ್ಣ ಭಜನೆಗಳು ಮತ್ತು ದಾಸ ಸಾಹಿತ್ಯದ ರಚನೆಗಳನ್ನು ವಿವಿಧ ರಾಗಗಳಲ್ಲಿ ಪ್ರಸ್ತುತಪಡಿಸಿ ಭಕ್ತರಿಗೆ ಸಂಗೀತ ರಸದೌತಣ ನೀಡಿದರು.

ಇದೇ ವೇಳೆ ಡಾ. ಸುಮಿತ್ರಾ ಭಟ್ ಅವರು 'ಮನೋನಿಗ್ರಹ–ಮನಸ್ಸಿನ ನಿಯಂತ್ರಣ' ಕುರಿತು ಭಗವದ್ಗೀತೆಯ ಉದಾಹರಣೆಗಳೊಂದಿಗೆ ಉಪನ್ಯಾಸ ನೀಡಿದರು. ಡಾ. ವಿಘ್ನೇಶ್ ಭಟ್ ಅವರು ಭಾರತೀಯ ಸಂಸ್ಕೃತಿ, ಆಧ್ಯಾತ್ಮಿಕತೆ ಹಾಗೂ ಭಾರತೀಯ ಜೀವನದರ್ಶನದ ಮಹತ್ವವನ್ನು ವಿವರಿಸಿ, ಜಾಗತಿಕ ಸಮಾಜ ಎದುರಿಸುತ್ತಿರುವ ಸವಾಲುಗಳಿಗೆ ಭಾರತೀಯ ಚಿಂತನಾ ಪರಂಪರೆ ನೀಡಬಲ್ಲ ಪರಿಹಾರಗಳ ಕುರಿತು ಮಾತನಾಡಿದರು.

ಸಂಜೆ ನಡೆದ ಪಲ್ಲಕ್ಕಿ ಉತ್ಸವ ಭಕ್ತರನ್ನು ವಿಶೇಷವಾಗಿ ಆಕರ್ಷಿಸಿತು. ಭಕ್ತಿಗೀತೆ, ಭಜನೆ ಹಾಗೂ ಆಧ್ಯಾತ್ಮಿಕ ವಾತಾವರಣದ ನಡುವೆ ಭಕ್ತರು ಉತ್ಸವದಲ್ಲಿ ಪಾಲ್ಗೊಂಡರು.

ಆಗಸ್ಟ್ 30ರಂದು ಉತ್ತರ ಆರಾಧನಾ ದಿನದಂದು ವಿವಿಧ ಧಾರ್ಮಿಕ ವಿಧಿವಿಧಾನಗಳು, ಅಷ್ಟಾವಧಾನ ಸೇವೆ, ಪ್ರಾರ್ಥನೆ ಹಾಗೂ ಆಶೀರ್ವಚನ ಕಾರ್ಯಕ್ರಮಗಳು ಸಂಜೆವರೆಗೂ ಮುಂದುವರಿದವು.

ವಿದೇಶದಲ್ಲಿ ನೆಲೆಸಿದ್ದರೂ ಭಾರತೀಯ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ ಪರಂಪರೆಯನ್ನು ಮುಂದುವರಿಸುವಲ್ಲಿ ಇಂತಹ ಮಹೋತ್ಸವಗಳು ಮಹತ್ವದ ಪಾತ್ರ ವಹಿಸುತ್ತಿವೆ.

ವಿಶ್ವಶಾಂತಿ, ವಿಶ್ವಕಲ್ಯಾಣ ಹಾಗೂ ಸಮಸ್ತ ಜೀವಿಗಳ ಸುಖ–ಸಮೃದ್ಧಿಗಾಗಿ ನಡೆಯುವ ಈ ಪವಿತ್ರ ಆರಾಧನಾ ಮಹೋತ್ಸವ ಭಕ್ತರಿಗೆ ಆಧ್ಯಾತ್ಮಿಕ ಅನುಭವವನ್ನು ನೀಡಿತು.

# ಕಾಂಗ್ರೆಸ್ ವಿರುದ್ಧ ಬಿಜೆಪಿ 'ಬಳ್ಳಾರಿ ಚಲೋ'

● ವಿಕ್ರಮ ವಾಹಿನಿ । ಲಿಂಗಸುಗೂರು

ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ, ಭ್ರಷ್ಟಾಚಾರ, ಬರಗಾಲ ಹಾಗೂ ರೈತರು, ದಲಿತರು, ಮಹಿಳೆಯರು ಮತ್ತು ಯುವಜನರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಹಮ್ಮಿಕೊಂಡಿರುವ ಹತ್ತು ದಿನಗಳ 'ಬಳ್ಳಾರಿ ಚಲೋ' ಪಾದಯಾತ್ರೆಗೆ ಲಿಂಗಸುಗೂರಿನಲ್ಲಿ ಚಾಲನೆ ದೊರೆಯಿತು.

ಪಾದಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಬಿಜೆಪಿ ಮುಖಂಡರು, ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ರಾಜ್ಯದ ವಿವಿಧ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸುವುದಾಗಿ ಘೋಷಿಸಿದರು.

ಸಹ ಉಸ್ತುವಾರಿ ಸುಧಾಕರ ರೆಡ್ಡಿ ಮಾತನಾಡಿ, ರಾಜ್ಯದಲ್ಲಿ ದಲಿತ, ರೈತ, ಎಸ್‌ಟಿ ಹಾಗೂ ಮಹಿಳಾ ವಿರೋಧಿ ಸರ್ಕಾರವಿದ್ದು, ಇದು ಅತ್ಯಂತ ಭ್ರಷ್ಟ ಸರ್ಕಾರ ಎಂದು ಆರೋಪಿಸಿದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ವಿವಿಧ ಆಯಾಮಗಳಲ್ಲಿ ಹಲವು ವಿಷಯಗಳನ್ನು ಮುಂದಿಟ್ಟುಕೊಂಡು ರಾಜ್ಯಾದ್ಯಂತ ಹೋರಾಟ ನಡೆಸಬೇಕಿದೆ. ಜನರ ಪರವಾಗಿ ಬಿಜೆಪಿ ಹೆಜ್ಜೆಗೆ ಹೆಜ್ಜೆ ಇಟ್ಟು ಕೆಲಸ ಮಾಡಲಿದೆ. ಜನರು ಪಕ್ಷದ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಮಾತನಾಡಿ, ಡಿ.ಕೆ. ಶಿವಕುಮಾರ್ ಸರ್ಕಾರಕ್ಕೆ ಎಚ್ಚರಿಕೆ ನೀಡುವ ಉದ್ದೇಶದಿಂದ ಪಾದಯಾತ್ರೆ ನಡೆಸಲಾಗುತ್ತಿದೆ. ಬಿಜೆಪಿ ಹೋರಾಟದ ಪರಿಣಾಮ ಬಿ. ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಕಾಂಗ್ರೆಸ್ ಸಚಿವ ಸಂಪುಟದಲ್ಲಿ ಹಲವು ಗುಂಪುಗಳಿದ್ದು, ದೇಣಿಗೆ ನೀಡಿದವರೇ ಮುಖ್ಯಮಂತ್ರಿ ಹಾಗೂ ಸಚಿವರಾಗುತ್ತಿದ್ದಾರೆ ಎಂದು ಆರೋಪಿಸಿದರು.

ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ, ಸಿದ್ದರಾಮಯ್ಯ ಸರ್ಕಾರದಲ್ಲಿ ದರೋಡೆ ನಡೆಯುತ್ತಿತ್ತು, ಇದೀಗ ಡಿ.ಕೆ. ಶಿವಕುಮಾರ್ ಸರ್ಕಾರ ತೆರಿಗೆ ಹೆಚ್ಚಳದ ಮೂಲಕ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಟೀಕಿಸಿದರು. ರಾಜ್ಯದ ಹಲವು ತಾಲೂಕುಗಳಲ್ಲಿ ಬರ ಪರಿಸ್ಥಿತಿ ಇದ್ದರೂ ಸಮರ್ಪಕವಾಗಿ ಬರ ಘೋಷಣೆ ಮಾಡಿಲ್ಲ. ಉಳಿದ ತಾಲೂಕುಗಳನ್ನೂ ಬರಪೀಡಿತವೆಂದು ಘೋಷಿಸಿ ರೈತರಿಗೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಕಾಂಗ್ರೆಸ್ ಸರ್ಕಾರ ಮಹಿಳಾ, ದಲಿತ, ಯುವಜನ ಹಾಗೂ ರೈತ ವಿರೋಧಿಯಾಗಿದೆ ಎಂದು ಆರೋಪಿಸಿದರು. ಕೇಂದ್ರದಿಂದ ಬಂದ ಹಣವನ್ನೂ ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ದೂರಿದರು.

ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಮಾತನಾಡಿ, ದಲಿತರಿಗಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಗಳಿಗೆ ಬಳಸಲಾಗಿದೆ ಎಂಬ ಆರೋಪಗಳ ಕುರಿತು ಸರ್ಕಾರ ಸ್ಪಷ್ಟನೆ ನೀಡಬೇಕು. ವಾಲ್ಮೀಕಿ ನಿಗಮದ ಹಣವನ್ನು ವಾಪಸ್ ಖಜಾನೆಗೆ ತರಬೇಕು ಹಾಗೂ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ಮಾಜಿ ಸಚಿವ ಬಿ. ಶ್ರೀರಾಮುಲು, ಸರ್ಕಾರ ಜನರಿಂದ ದೂರವಾಗಿ ಆಡಳಿತ ನಡೆಸುತ್ತಿದೆ. ರಾಜ್ಯದಲ್ಲಿ ಭ್ರಷ್ಟಾಚಾರ ಮಿತಿಮೀರಿದ್ದು, ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದೆ. ಬರದಿಂದ ರೈತರು ಗುಳೆ ಹೋಗುತ್ತಿದ್ದರೂ ಸರ್ಕಾರ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಮಾಜಿ ಸಚಿವ ಸಿ.ಟಿ. ರವಿ, ಜನಹಿತಕ್ಕಾಗಿ ಬಿಜೆಪಿ ಹೋರಾಟ ನಡೆಸುತ್ತಿದೆ. ಒಂದೆಡೆ ಜನರು ಬರದಿಂದ ಸಂಕಷ್ಟದಲ್ಲಿದ್ದರೆ, ಮತ್ತೊಂದೆಡೆ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯದಿಂದ ಜನತೆ ತೊಂದರೆ ಅನುಭವಿಸುತ್ತಿದ್ದಾರೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ರೈತರು ಹಾಗೂ ಸಾಮಾನ್ಯ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು.

ಮಾಜಿ ಸಂಸದ ವಿರೂಪಾಕ್ಷಪ್ಪ ಸರ್ಕಾರದ ಆಡಳಿತವನ್ನು ಟೀಕಿಸಿ, 'ಕುರಿ ಕಾಯಲು ತೋಳನನ್ನು ನೇಮಿಸಿದಂತಾಗಿದೆ' ಎಂದು ವ್ಯಂಗ್ಯವಾಡಿದರು.

ಮಾಜಿ ಸಚಿವ ಜನಾರ್ದನ ರೆಡ್ಡಿ ಮಾತನಾಡಿ, ಲಿಂಗಸುಗೂರಿನಿಂದ ಪಾದಯಾತ್ರೆ ಆರಂಭವಾಗಿರುವುದು ಶುಭ ಸೂಚನೆ. ನವಲಿ ಜಲಾಶಯ ನಿರ್ಮಾಣಕ್ಕೆ 20 ಸಾವಿರ ಕೋಟಿ ಮೀಸಲಿಡಬೇಕು. 2028ರಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಅಭ್ಯರ್ಥಿ ಶಶೀಲ್ ನಮೋಶಿ, ಮಳೆ ಕೊರತೆಯಿಂದ ಈ ಭಾಗದಲ್ಲಿ ಬರ ತೀವ್ರಗೊಂಡಿದ್ದರೂ ಸರ್ಕಾರ ಸಮರ್ಪಕವಾಗಿ ಸ್ಪಂದಿಸಿಲ್ಲ ಎಂದು ಆರೋಪಿಸಿದರು. ಶಾಸಕ ಮಾನಪ್ಪ ವಜ್ಜಲ್ ಮಾತನಾಡಿ, ಲಿಂಗಸುಗೂರಿನಿಂದ ಬಳ್ಳಾರಿವರೆಗೆ ನಡೆಯುವ ಪಾದಯಾತ್ರೆಯಲ್ಲಿ ಕಾಂಗ್ರೆಸ್ ಸರ್ಕಾರದ ಅವ್ಯವಹಾರ, ಹಗರಣ ಹಾಗೂ ಆಡಳಿತ ವೈಫಲ್ಯಗಳನ್ನು ಜನರ ಮುಂದಿಡಲಾಗುವುದು ಎಂದರು.

ಲಿಂಗಸುಗೂರಿನಿಂದ ಆರಂಭಗೊಂಡಿರುವ 'ಬಳ್ಳಾರಿ ಚಲೋ' ಪಾದಯಾತ್ರೆ ಬಳ್ಳಾರಿವರೆಗೆ ಸಾಗಲಿದ್ದು, ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧದ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ನಾಯಕರು ಘೋಷಿಸಿದರು.

## ಕಾಂಗ್ರೆಸ್ ಸರ್ಕಾರ ಕಿತ್ತೊಗೆಯುವ ಶಕ್ತಿ ಬಿಜೆಪಿ ಪಾದಯಾತ್ರೆಗಿದೆ: ವಿಜಯೇಂದ್ರ

● ವಿಕ್ರಮ ವಾಹಿನಿ । ಲಿಂಗಸುಗೂರು




ರಾಜ್ಯದ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ, ಆಡಳಿತ ವೈಫಲ್ಯ, ಬರಗಾಲ ಹಾಗೂ ರೈತರು, ದಲಿತರು, ಬಡವರು, ಯುವಕರು ಮತ್ತು ಮಹಿಳೆಯರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಆರಂಭಿಸಿರುವ ಪಾದಯಾತ್ರೆ ಕರ್ನಾಟಕದ ರಾಜಕೀಯ ದಿಕ್ಕನ್ನೇ ಬದಲಿಸುವ ಶಕ್ತಿ ಹೊಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಲಿಂಗಸುಗೂರಿನಿಂದ ಆರಂಭಗೊಂಡ ಬಿಜೆಪಿ ಪಾದಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಇದು ಕೇವಲ ರಾಜಕೀಯ ಕಾರ್ಯಕ್ರಮವಲ್ಲ. ಜನರ ಹಕ್ಕು, ನ್ಯಾಯ ಮತ್ತು ಭವಿಷ್ಯಕ್ಕಾಗಿ ನಡೆಯುತ್ತಿರುವ ಜನಾಂದೋಲನ. ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಮೂಡಿರುವ ಆಕ್ರೋಶವೇ ಪಾದಯಾತ್ರೆಗೆ ಕಾರಣ ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬಿಜೆಪಿ ಏಕೆ ಪಾದಯಾತ್ರೆ ನಡೆಸುತ್ತಿದೆ ಎಂದು ಪ್ರಶ್ನಿಸುತ್ತಿದ್ದಾರೆ. ಸರ್ಕಾರದ ವೈಫಲ್ಯಗಳೇ ಇದಕ್ಕೆ ಕಾರಣ ಎಂಬುದನ್ನು ಮೊದಲು ತಮ್ಮ ಸರ್ಕಾರದ ಕನ್ನಡಿಯಲ್ಲಿ ನೋಡಿಕೊಳ್ಳಲಿ. ಭ್ರಷ್ಟಾಚಾರವನ್ನು ರಕ್ಷಿಸುವ ಸರ್ಕಾರವನ್ನು ಕಿತ್ತೊಗೆಯುವವರೆಗೂ ಬಿಜೆಪಿ ಹೋರಾಟ ನಿಲ್ಲುವುದಿಲ್ಲ ಎಂದು ವಿಜಯೇಂದ್ರ ಎಚ್ಚರಿಸಿದರು.

### ನಾಗೇಂದ್ರ ರಾಜೀನಾಮೆ ಮೊದಲ ಹಂತದ ಜಯ

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ದುರುಪಯೋಗದ ಆರೋಪಗಳ ಹಿನ್ನೆಲೆಯಲ್ಲಿ ಸಚಿವ ಬಿ. ನಾಗೇಂದ್ರ ರಾಜೀನಾಮೆ ನೀಡಬೇಕಾಯಿತು. ಬಿಜೆಪಿ ಹೋರಾಟ ತೀವ್ರಗೊಳಿಸಿದ ಪರಿಣಾಮ ಸರ್ಕಾರ ರಾಜೀನಾಮೆ ಪಡೆಯುವ ಪರಿಸ್ಥಿತಿ ನಿರ್ಮಾಣವಾಯಿತು. ಇದು ಬಿಜೆಪಿ ಹೋರಾಟದ ಮೊದಲ ಹಂತದ ಜಯ ಎಂದು ವಿಜಯೇಂದ್ರ ಹೇಳಿದರು.

ವಾಲ್ಮೀಕಿ ನಿಗಮದ ಸುಮಾರು 187 ಕೋಟಿ ಹಣದ ಅಕ್ರಮದ ಆರೋಪದ ಕುರಿತು ಸರ್ಕಾರ ಸ್ಪಷ್ಟ ಉತ್ತರ ನೀಡಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಾದ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಲಾಗಿದೆ ಎಂಬ ಆರೋಪಗಳ ಬಗ್ಗೆಯೂ ಸರ್ಕಾರ ಉತ್ತರಿಸಬೇಕು ಎಂದು ಆಗ್ರಹಿಸಿದರು.

### 'ದಲಿತರ ಪರ ಕಾಳಜಿ ಎಲ್ಲಿದೆ?'

ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರ ವಿಚಾರದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವನ್ನು ಪ್ರಶ್ನಿಸಿದ ವಿಜಯೇಂದ್ರ, ದಲಿತರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಸರ್ಕಾರ ನಿಜವಾಗಿಯೂ ಸಾಮಾಜಿಕ ನ್ಯಾಯದ ಪರವಾಗಿದ್ದರೆ, ದಲಿತರ ಹಣ, ಹಕ್ಕು ಮತ್ತು ಬದುಕನ್ನು ರಕ್ಷಿಸುವ ಜವಾಬ್ದಾರಿ ನಿರ್ವಹಿಸಬೇಕು ಎಂದರು.

ದಲಿತ ಸಮುದಾಯದ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಹತ್ಯೆಗಳ ಕುರಿತು ಸರ್ಕಾರ ಗಂಭೀರವಾಗಿ ಸ್ಪಂದಿಸಬೇಕು. ಸಂತ್ರಸ್ತ ಕುಟುಂಬಗಳಿಗೆ ಸರ್ಕಾರದ ಪ್ರಮುಖರು ಭೇಟಿ ನೀಡಿ ಧೈರ್ಯ ತುಂಬಬೇಕು ಎಂದು ಒತ್ತಾಯಿಸಿದರು.

### ಬರದಿಂದ ರೈತರು ಸಂಕಷ್ಟದಲ್ಲಿ

ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ ಎಂದು ವಿಜಯೇಂದ್ರ ಆರೋಪಿಸಿದರು.

175 ತಾಲೂಕುಗಳಲ್ಲಿ ಬರದ ಪರಿಸ್ಥಿತಿ ಇದ್ದರೂ 101 ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಲಾಗಿದೆ. ರೈತರ ಸಂಕಷ್ಟ ನಿವಾರಣೆಗೆ ತಕ್ಷಣ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಪ್ರವಾಹದಿಂದ ಮನೆ ಕಳೆದುಕೊಂಡವರಿಗೆ 5 ಲಕ್ಷ ಪರಿಹಾರ ನೀಡಲಾಗಿತ್ತು. ಆದರೆ ಈಗಿನ ಸರ್ಕಾರ ಸಂಕಷ್ಟದಲ್ಲಿರುವ ಜನರಿಗೆ ಸಮರ್ಪಕ ನೆರವು ನೀಡುತ್ತಿಲ್ಲ ಎಂದು ಟೀಕಿಸಿದರು.

### ಯುವಕರ ಭವಿಷ್ಯದ ಜೊತೆ ಚೆಲ್ಲಾಟ ಬೇಡ

ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಪ್ರಕ್ರಿಯೆಯಲ್ಲಿನ ಅಕ್ರಮಗಳ ಆರೋಪಗಳ ಕುರಿತು ಮಾತನಾಡಿದ ಅವರು, ರಾಜ್ಯದಲ್ಲಿ ಲಕ್ಷಾಂತರ ಸರ್ಕಾರಿ ಹುದ್ದೆಗಳು ಖಾಲಿ ಇದ್ದರೂ ಅವುಗಳನ್ನು ಭರ್ತಿ ಮಾಡುವಲ್ಲಿ ಸರ್ಕಾರ ವಿಫಲವಾಗಿದೆ. ನೇಮಕಾತಿ ಅಕ್ರಮಗಳಲ್ಲಿ ಯಾರೇ ಭಾಗಿಯಾಗಿದ್ದರೂ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

ಖಾಲಿ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು ಎಂದು ಒತ್ತಾಯಿಸಿದರು.

### 'ಮುಂದಿನ ಸಚಿವರ ರಾಜೀನಾಮೆಗೆ ಸಿದ್ಧರಾಗಿ'

ಬಿಜೆಪಿ ಪಾದಯಾತ್ರೆಯನ್ನು ಸರ್ಕಾರ ಹಗುರವಾಗಿ ಪರಿಗಣಿಸಬಾರದು. ಈ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸಚಿವ ಸಂಪುಟದ ಮತ್ತೊಬ್ಬ ಪ್ರಮುಖ ಸಚಿವರು ರಾಜೀನಾಮೆ ನೀಡುವ ಪರಿಸ್ಥಿತಿ ಬರಲಿದೆ ಎಂದು ವಿಜಯೇಂದ್ರ ಎಚ್ಚರಿಕೆ ನೀಡಿದರು.

2028ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ. ಕಾಂಗ್ರೆಸ್ ಸರ್ಕಾರದ ಆಡಳಿತದಿಂದ ಜನರು ಬೇಸತ್ತಿದ್ದು, ಮುಂದಿನ ಚುನಾವಣೆಯಲ್ಲಿ ಜನರು ತಕ್ಕ ಉತ್ತರ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಲಿಂಗಸುಗೂರಿನಿಂದ ಆರಂಭಗೊಂಡಿರುವ ಪಾದಯಾತ್ರೆ ರೈತರು, ದಲಿತರು, ಬಡವರು, ಯುವಕರು ಹಾಗೂ ಮಹಿಳೆಯರ ಸಮಸ್ಯೆಗಳ ಧ್ವನಿಯಾಗಿದೆ. ಕಾಂಗ್ರೆಸ್ ಸರ್ಕಾರದ ಜನವಿರೋಧಿ ಆಡಳಿತದ ವಿರುದ್ಧ ಬಿಜೆಪಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಿದೆ ಎಂದು ಬಿ.ವೈ. ವಿಜಯೇಂದ್ರ ಹೇಳಿದರು.

---

## ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಕಚೇರಿಗೆ ಜೆಡಿಎಸ್ ಕಾರ್ಯಕರ್ತರ ಮುತ್ತಿಗೆ ಯತ್ನ

● ವಿಕ್ರಮ ವಾಹಿನಿ । ಬೆಂಗಳೂರು

ಸಹಾಯಕ ಎಕ್ಸಿಕ್ಯೂಟಿವ್ ಎಂಜಿನಿಯರ್ ಗ್ರೇಡ್ 1 ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಯಲ್ಲಿ ನಡೆದಿರುವ ಅಕ್ರಮದಲ್ಲಿ ಶಾಮೀಲಾಗಿರುವ ಪ್ರಿಯಾಂಕ್ ಖರ್ಗೆ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಜೆಡಿಎಸ್ ಕಾರ್ಯಕರ್ತರು ಕ್ವೀನ್ಸ್ ರಸ್ತೆಯಲ್ಲಿರುವ ಪ್ರದೇಶ ಕಾಂಗ್ರೆಸ್ ಕಚೇರಿಗೆ (ಕೆಪಿಸಿಸಿ) ಮುತ್ತಿಗೆ ಹಾಕಿದರು.

ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಹೆಚ್. ಎಂ. ರಮೇಶ್ ಗೌಡ ನೇತೃತ್ವದಲ್ಲಿ ನಡೆದ ಈ ಮುತ್ತಿಗೆ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಸೇರಿದಂತೆ ನೂರಾರು ಕಾರ್ಯಕರ್ತರು, ಮುಖಂಡರು ಭಾಗಿಯಾಗಿದ್ದರು.

ಕೆಪಿಸಿಸಿ ಕಚೇರಿಗೆ ನುಗ್ಗಲೆತ್ನಿಸಿದ ಕಾರ್ಯಕರ್ತರನ್ನು ಬ್ಯಾರಿಗೇಡ್‌ಗಳನ್ನು ಅಡ್ಡಲಾಗಿ ಹಾಕಿ ಪೊಲೀಸರು ತಡೆದರು. ಈ ವೇಳೆ ಪೊಲೀಸರು ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ತೀವ್ರ ವಾಗ್ವಾದ ನಡೆಯಿತು. ಬ್ಯಾರಿಗೇಡ್‌ಗಳನ್ನು ನೂಕಿ ಕಚೇರಿಗೆ ನುಗ್ಗಲು ಯತ್ನಿಸಿದಾಗ ಪರಿಸ್ಥಿತಿ ಉದ್ವಿಗ್ನಗೊಂಡಿತು. ತಕ್ಷಣ



ಕಾರ್ಯಪ್ರವೃತ್ತರಾದ ಪೊಲೀಸರು ಹಲವು ನಾಯಕರು ಹಾಗೂ ಕಾರ್ಯಕರ್ತರನ್ನು ವಶಕ್ಕೆ ಪಡೆದರು.

ಈ ಸಂದರ್ಭದಲ್ಲಿ ಪ್ರತಿಭಟನೆಯನ್ನು ಹತ್ತಿಕ್ಕಲು ಯತ್ನಿಸಿದ ಸರಕಾರದ ವಿರುದ್ಧ ಜೆಡಿಎಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಡಿಸಿದರು. ಈ ಸಂದರ್ಭದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಹೆಚ್. ಎಂ. ರಮೇಶ್ ಗೌಡರು; ನಾವು ಶಾಂತಿಯುತವಾಗಿ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಂಡಿದ್ದೆವು. ಶಾಂತಿಭಂಗ ಉಂಟು ಮಾಡುವುದು ನಮ್ಮ ಉದ್ದೇಶ ಆಗಿರಲಿಲ್ಲ. ಆದರೂ ಪೊಲೀಸರು ನಮ್ಮನ್ನು ವಶಕ್ಕೆ ಪಡೆದಿರುವುದು ಸರಿಯಲ್ಲ ಎಂದರು.

ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ನಾಯಕರು ಮತ್ತು ಜೆಡಿಎಸ್ ಪಕ್ಷದ ಬಗ್ಗೆ ಕೆಟ್ಟದ್ದಾಗಿ ಪೋಸ್ಟರ್‌ಗಳನ್ನು ಹಾಕುವುದು, ಗೋಡೆಗಳ ಮೇಲೆ ಅವಹೇಳನಕಾರಿ ಪೋಸ್ಟರ್‌ಗಳನ್ನು ಅಂಟಿಸುವುದು, ವಿಧಾನಸೌಧದ ಬಳಿ ಪೊಲೀಸರ ಮೇಲೆಯೇ ಹಲ್ಲೆ ಮಾಡಲು ಯತ್ನಿಸುವ ಕಾಂಗ್ರೆಸ್ ಪಕ್ಷದ ಮುಖಂಡರುಗಳ ಮೇಲೆ ಯಾವುದೇ ಕ್ರಮ ಜರುಗಿಸದ ಪೊಲೀಸರು, ಜೆಡಿಎಸ್ ಕಾರ್ಯಕರ್ತರ ಮೇಲೆ ವೀರಾವೇಶದಿಂದ ಕೇಸು ದಾಖಲಿಸುತ್ತಾರೆ ಎಂದು ಹೇಳಿದರು.

ಕೆಪಿಎಸ್ಸಿ ಅಕ್ರಮಗಳಲ್ಲಿ ತೊಡಗಿದ್ದು, ಅದಕ್ಕೆ ಸರಕಾರವು ಸಾಥ್ ನೀಡುತ್ತಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಪಶುಸಂಗೋಪನಾ ಇಲಾಖೆಯಲ್ಲಿ ನಡೆದಿರುವ ಅಕ್ರಮ ಆಯ್ಕೆ, ನೇಮಕಾತಿಗಳೇ ಇದಕ್ಕೆ ಕಾರಣ ಎಂದು ದೂರಿದ ರಮೇಶ್ ಗೌಡ, ಇದಕ್ಕೆ ಸಂಬಂಧಪಟ್ಟ ಎಲ್ಲರ ತಲೆದಂಡವಾಗಬೇಕು ಎಂದು ಒತ್ತಾಯಿಸಿದರು.

ಒಂದು ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡದಿದ್ದರೆ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಸಿದ ಅವರು; ರೆಸಾರ್ಟ್ ನಲ್ಲಿ ಪರೀಕ್ಷೆ ಬರೆದು ಅಕ್ರಮವಾಗಿ ಹುದ್ದೆ ಗಿಟ್ಟಿಸಿರುವ ಎಲ್ಲರನ್ನೂ ಕೆಲಸದಿಂದ ಕಿತ್ತೆಸೆಯಬೇಕು ಹಾಗೂ ಅದರಲ್ಲಿ ಶಾಮೀಲಾದ ಎಲ್ಲಾ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

---

## ಭಾರತಕ್ಕೆ ಶೇ.7.8 ಆರ್ಥಿಕ ಪ್ರಗತಿ: ರವಿಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಜಾಗತಿಕ ಮಟ್ಟದಲ್ಲಿ ಯುದ್ಧದ ವಾತಾವರಣ, ಕೋವಿಡ್ ನಂತರದ ಪೂರೈಕೆ ಸರಣಿ ವ್ಯತ್ಯಯ ಹಾಗೂ ಆರ್ಥಿಕ ಅನಿಶ್ಚಿತತೆಗಳ ನಡುವೆಯೂ ಭಾರತ ಶೇ.7.8ರ ಆರ್ಥಿಕ ಬೆಳವಣಿಗೆ ಸಾಧಿಸಿರುವುದು ದೇಶದ ಆರ್ಥಿಕ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವ ಹಾಗೂ ರಾಜತಾಂತ್ರಿಕ ಪ್ರಯತ್ನಗಳಿಂದಾಗಿ ಭಾರತ ಜಾಗತಿಕ ಆರ್ಥಿಕ ವ್ಯವಸ್ಥೆಯಲ್ಲಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸಿಕೊಳ್ಳುತ್ತಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ದೇಶ ಪ್ರಗತಿಯ ಹಾದಿಯಲ್ಲಿ ಸಾಗುತ್ತಿರುವ ಸಂದರ್ಭದಲ್ಲಿ ಕಾಂಗ್ರೆಸ್ ದೇಶದ ಸಾಧನೆಯನ್ನು ಸಂಭ್ರಮಿಸುವ ಬದಲು ನಕಾರಾತ್ಮಕ ರಾಜಕೀಯ ನಡೆಸುತ್ತಿದೆ ಎಂದು ರವಿಕುಮಾರ್ ಆರೋಪಿಸಿದರು. ಸಮಾಜದಲ್ಲಿ ಗೊಂದಲ ಮೂಡಿಸುವ ಪ್ರಯತ್ನಗಳನ್ನು ಕಾಂಗ್ರೆಸ್ ಕೈಬಿಡಬೇಕು ಎಂದು ಆಗ್ರಹಿಸಿದರು.



ಪ್ರಧಾನಮಂತ್ರಿಯವರು ಪ್ರತಿಪಾದಿಸಿರುವ ಆತ್ಮನಿರ್ಭರ ಭಾರತ, ಸ್ವದೇಶಿ ಮಂತ್ರ, ವೋಕಲ್ ಫಾರ್ ಲೋಕಲ್, ಮೇಕ್ ಇನ್ ಇಂಡಿಯಾ ಹಾಗೂ ವಿಕಸಿತ ಭಾರತ–2047 ಎಂಬ ಐದು ಆಶಯಗಳನ್ನು ಪ್ರತಿಯೊಬ್ಬ ನಾಗರಿಕರೂ ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶೀಯ ಉತ್ಪನ್ನಗಳು ಮತ್ತು ಸೇವೆಗಳಿಗೆ ಆದ್ಯತೆ ನೀಡುವ ಮೂಲಕ ಭಾರತೀಯ ಆರ್ಥಿಕತೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ಮನವಿ ಮಾಡಿದರು.

ಅನಗತ್ಯ ವಿದೇಶಿ ವಸ್ತುಗಳ ಖರೀದಿ, ವಿದೇಶ ಪ್ರವಾಸ ಹಾಗೂ ವಿದೇಶಗಳಲ್ಲಿ ದುಬಾರಿ ಕಾರ್ಯಕ್ರಮಗಳನ್ನು ಆಯೋಜಿಸುವ ಪ್ರವೃತ್ತಿಯನ್ನು ಕಡಿಮೆ ಮಾಡಿ, ದೇಶದ ಸಂಪತ್ತು ದೇಶದ ಅಭಿವೃದ್ಧಿಗೆ ಬಳಕೆಯಾಗುವಂತೆ ನೋಡಿಕೊಳ್ಳಬೇಕು. 'ದೇಶವೇ ಮೊದಲು' ಎಂಬ ಭಾವನೆಯೊಂದಿಗೆ ಪ್ರತಿಯೊಬ್ಬರೂ ನವ ಭಾರತದ ನಿರ್ಮಾಣದಲ್ಲಿ ಪಾಲುದಾರರಾಗಬೇಕು ಎಂದು ಎನ್. ರವಿಕುಮಾರ್ ಕರೆ ನೀಡಿದರು.

ಜಾಗತಿಕ ಆರ್ಥಿಕ ಸವಾಲುಗಳ ನಡುವೆಯೂ ದೇಶದ ಆರ್ಥಿಕತೆ ಸದೃಢವಾಗಿ ಸಾಗುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಮುಂದಿನ ದಿನಗಳಲ್ಲಿ ಭಾರತವನ್ನು ಇನ್ನಷ್ಟು ಬಲಿಷ್ಠ ಆರ್ಥಿಕ ಶಕ್ತಿಯನ್ನಾಗಿ ರೂಪಿಸಲು ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಜನರು ಸಹಕಾರ ನೀಡಬೇಕು. ಸ್ವದೇಶಿ ಉತ್ಪನ್ನಗಳ ಬಳಕೆ, ಸ್ಥಳೀಯ ಉದ್ಯಮಗಳಿಗೆ ಪ್ರೋತ್ಸಾಹ ಹಾಗೂ ದೇಶೀಯ ಹೂಡಿಕೆಗೆ ಆದ್ಯತೆ ನೀಡುವ ಮೂಲಕ 'ವಿಕಸಿತ ಭಾರತ–2047' ಸಂಕಲ್ಪವನ್ನು ಸಾಕಾರಗೊಳಿಸಬಹುದು ಎಂದು ಅವರು ತಿಳಿಸಿದರು.

ಭಾರತೀಯ ಉತ್ಪನ್ನಗಳ ಬಳಕೆಯನ್ನು ಹೆಚ್ಚಿಸುವ ಮೂಲಕ ಸ್ಥಳೀಯ ಉದ್ಯಮಿಗಳು ಹಾಗೂ ಕಾರ್ಮಿಕರಿಗೆ ಬೆಂಬಲ ನೀಡಬಹುದು. ಆತ್ಮನಿರ್ಭರ ಭಾರತದ ಗುರಿ ಸಾಧನೆಗೆ ಪ್ರತಿಯೊಬ್ಬ ನಾಗರಿಕರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಎನ್. ರವಿಕುಮಾರ್ ಹೇಳಿದರು.

---

## ಬರದ 2ನೇ ಪಟ್ಟಿ ಶೀಘ್ರ: ಡಿಕೆಶಿ

1ನೇ ಪುಟದಿಂದ...

ಸದ್ಯ ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಲಾಗಿದ್ದು, ಜಿಲ್ಲೆಯ ಎಲ್ಲ ತಾಲೂಕುಗಳನ್ನೂ ಬರಪೀಡಿತ ಎಂದು ಘೋಷಿಸುವಂತೆ ಶಾಸಕರು ಮನವಿ ಮಾಡಿದ್ದಾರೆ. ಈ ಕುರಿತು ಮಾರ್ಗಸೂಚಿಯಂತೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಕೇಂದ್ರದ ನೆರವಿಗೆ ವರದಿ ಮುಖ್ಯ: ರಾಜ್ಯದ ಬರದ ವರದಿ ಕೇಂದ್ರದ ಅಧ್ಯಯನ ತಂಡದ ವರದಿಗೆ ಹೊಂದಿಕೆಯಾಗಬೇಕು. ಆಗ ಮಾತ್ರ ಕೇಂದ್ರದಿಂದ ಅಗತ್ಯ ನೆರವು ಪಡೆಯಲು ಸಾಧ್ಯ. ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಕ್ರಮ ಕೈಗೊಳ್ಳಲಾಗಿದ್ದು, ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ಅನುದಾನ ನೀಡಲಾಗಿದೆ ಎಂದು ಡಿಕೆಶಿ ಹೇಳಿದರು.

ನೀರಾವರಿ, ಬೆಣ್ಣೆಹಳ್ಳ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದೆ. ರಾಜ್ಯದ ಆರ್ಥಿಕ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಇದೇ ವೇಳೆ, ಆಡಳಿತ ವ್ಯವಸ್ಥೆಯನ್ನು ಚುರುಕುಗೊಳಿಸುವ ಉದ್ದೇಶದಿಂದ ಸೆಪ್ಟೆಂಬರ್ 5ರಿಂದ 'ಪ್ರಜಾಸೇವಾ ಆಂದೋಲನ' ಆರಂಭಿಸಲಾಗುವುದು. ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪುವಂತೆ ಪಂಚಾಯಿತಿ ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ, ದುರ್ಬಳಕೆ ತಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

---

## ಬಿಜೆಪಿ ಹೋರಾಟಕ್ಕೆ ಬ್ರೇಕ್ ಇಲ್ಲ: ಅಶೋಕ್

● ವಿಕ್ರಮ ವಾಹಿನಿ । ಲಿಂಗಸಗೂರು

ಬಿ. ನಾಗೇಂದ್ರ ರಾಜೀನಾಮೆ ನೀಡಿರುವುದರಿಂದ ಬಿಜೆಪಿಯ ಹೋರಾಟ ಅಂತ್ಯವಾಗುವುದಿಲ್ಲ. ಬರಗಾಲ, ಕೆಪಿಎಸ್‌ಸಿ ಪರೀಕ್ಷಾ ಅಕ್ರಮ, ಬಿಡದಿ ಟೌನ್‌ಶಿಪ್, ಪಿಂಚಣಿ ಬಾಕಿ ಸೇರಿದಂತೆ ಹಲವು ವಿಚಾರಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟ ಮುಂದುವರಿಸಲಾಗುವುದು. ನಮ್ಮ ಹೋರಾಟದಿಂದ ಇನ್ನಷ್ಟು ಸಚಿವರು ರಾಜೀನಾಮೆ ನೀಡಬೇಕಾಗುತ್ತದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದರು.

ಬಿಜೆಪಿ ಹಮ್ಮಿಕೊಂಡಿರುವ 'ಬಳ್ಳಾರಿ ಚಲೋ' ಪಾದಯಾತ್ರೆಯ ಚಾಲನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ 175 ತಾಲೂಕುಗಳಲ್ಲೂ ಬರ ಪರಿಸ್ಥಿತಿ ಇದ್ದರೂ 74 ತಾಲೂಕುಗಳಲ್ಲಿ ಬರ ಘೋಷಿಸಿಲ್ಲ. ಸರ್ಕಾರ ಕೂಡಲೇ ಎಲ್ಲ ತಾಲೂಕುಗಳಲ್ಲೂ ಬರ ಘೋಷಿಸಿ ರೈತರಿಗೆ ಪರಿಹಾರ ನೀಡಬೇಕು. ಸೂರ್ಯಕಾಂತಿ, ಜೋಳ, ತೊಗರಿ ಸೇರಿದಂತೆ ಹಲವು ಬೆಳೆಗಳು ನಷ್ಟವಾಗಿದ್ದು, ಪ್ರತಿ ರೈತರಿಗೆ ಎಕರೆಗೆ ರೂ 50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ರೈತರಿಗೆ ಈವರೆಗೆ ಒಂದು ರೂಪಾಯಿ ಪರಿಹಾರ ನೀಡಿಲ್ಲ ಎಂದು ಆರೋಪಿಸಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೂ ಜನರು ಪರದಾಡುತ್ತಿದ್ದಾರೆ. ಸರ್ಕಾರದ ಬಳಿ ಹಣವಿಲ್ಲದಿದ್ದರೆ ಅದನ್ನು ಒಪ್ಪಿಕೊಳ್ಳಬೇಕು ಎಂದು ಟೀಕಿಸಿದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಎನ್‌ಡಿಆರ್‌ಎಫ್ ಮಾರ್ಗಸೂಚಿಗಿಂತ ಹೆಚ್ಚಿನ ಪರಿಹಾರ ನೀಡಲಾಗಿತ್ತು. ಅದೇ ರೀತಿಯಲ್ಲಿ ಈಗಿನ ಸರ್ಕಾರವೂ ರೈತರ ನೆರವಿಗೆ ಧಾವಿಸಬೇಕು ಎಂದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ ಪ್ರಕರಣವನ್ನು ಪ್ರಸ್ತಾಪಿಸಿದ ಅಶೋಕ, ರೂ 187 ಕೋಟಿ ಅಕ್ರಮದ ಹಿನ್ನೆಲೆಯಲ್ಲಿ ಬಿ. ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಆದರೆ ನಾಗೇಂದ್ರ ಕೇವಲ ಬಲಿಪಶು; ಪ್ರಕರಣದ ಹಣವನ್ನು ಕಾಂಗ್ರೆಸ್ ಪಕ್ಷದ ವಿವಿಧ ಚಟುವಟಿಕೆಗಳಿಗೆ ಬಳಸಲಾಗಿದೆ ಎಂಬ ಆರೋಪವನ್ನು ಅವರು ಮಾಡಿದರು.

### 'ಕೆಪಿಎಸ್‌ಸಿ ಅಕ್ರಮದಲ್ಲಿ ಸಚಿವರ ಹೆಸರು ಕೇಳಿಬಂದಿದೆ'

ಕೆಪಿಎಸ್‌ಸಿ ಪರೀಕ್ಷಾ ಅಕ್ರಮದ ಕುರಿತು ಮಾತನಾಡಿದ ಅಶೋಕ, ನೇಮಕಾತಿ ವ್ಯವಸ್ಥೆಯಲ್ಲಿ ಅಕ್ರಮಗಳು ನಡೆದಿರುವ ಆರೋಪಗಳಿದ್ದು, ತಪ್ಪಿತಸ್ಥರನ್ನು



ಬಂಧಿಸಿ ಕಠಿಣ ಶಿಕ್ಷೆ ನೀಡಬೇಕು. ಈ ವಿಚಾರವನ್ನು ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ಪ್ರಸ್ತಾಪಿಸಲಾಗುವುದು. ಪರೀಕ್ಷಾ ಅಕ್ರಮದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೆಸರೂ ಕೇಳಿಬಂದಿದ್ದು, ಈ ಹಿನ್ನೆಲೆಯಲ್ಲಿ ಮತ್ತೊಬ್ಬ ಸಚಿವರ ರಾಜೀನಾಮೆ ಆಗಬೇಕಾಗುತ್ತದೆ ಎಂದು ಅವರು ಆರೋಪಿಸಿದರು.

ರಾಜ್ಯದಲ್ಲಿ ಆಡಳಿತ ವ್ಯವಸ್ಥೆಯಲ್ಲಿ ವ್ಯಾಪಕ ಸುಧಾರಣೆ ಅಗತ್ಯವಿದೆ. ಉದ್ಯೋಗಾಕಾಂಕ್ಷಿಗಳ ಸಮಸ್ಯೆ ಹಾಗೂ ಪರೀಕ್ಷಾ ಅಕ್ರಮಗಳ ವಿರುದ್ಧ ನಡೆಯುತ್ತಿರುವ ಹೋರಾಟಗಳಿಗೆ ಬಿಜೆಪಿ ಬೆಂಬಲ ನೀಡಲಿದೆ ಎಂದರು.

### ಹಲವು ವಿಚಾರಗಳ ವಿರುದ್ಧ ಹೋರಾಟ

ಬರ ಪರಿಹಾರ, ಕೆಪಿಎಸ್‌ಸಿ ಹಗರಣ, ಪಿಂಚಣಿ ಬಾಕಿ, ರೇಷನ್ ಕಾರ್ಡ್ ರದ್ದು, ಕಸದ ಟೆಂಡರ್ ಅಕ್ರಮ, ಸುರಂಗ ರಸ್ತೆ ಹಾಗೂ ಬಿಡದಿ ಟೌನ್‌ಶಿಪ್ ಸೇರಿದಂತೆ ಹಲವು ವಿಷಯಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟ ಮುಂದುವರಿಯಲಿದೆ. ಬಿ. ನಾಗೇಂದ್ರ ರಾಜೀನಾಮೆಯಿಂದ ಬಿಜೆಪಿ ಹೋರಾಟಕ್ಕೆ ಯಾವುದೇ ವಿರಾಮವಿಲ್ಲ ಎಂದು ಅಶೋಕ ಸ್ಪಷ್ಟಪಡಿಸಿದರು.

ಇದೇ ವೇಳೆ ಸಚಿವ ಬಸವರಾಜ ರಾಯರೆಡ್ಡಿ ಅವರ ಧಾರ್ಮಿಕ ಹೇಳಿಕೆಗಳಿಗೂ ಅಶೋಕ ಆಕ್ಷೇಪ ವ್ಯಕ್ತಪಡಿಸಿದರು. ಅವರ ಹೇಳಿಕೆಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಕ್ರಮ ಕೈಗೊಂಡು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು. ಹಿಂದೂ ಧರ್ಮದ ಕುರಿತು ಅವಹೇಳನಕಾರಿ ಹೇಳಿಕೆಗಳನ್ನು ನೀಡುವುದನ್ನು ಬಿಜೆಪಿ ಸಹಿಸುವುದಿಲ್ಲ ಎಂದು ಹೇಳಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ‘ಪಾರ್ಕ್ ಜಾಗದ ಶೇ.5 ರಷ್ಟು ಬಳಕೆ ಪ್ರಸ್ತಾವನೆ ವಿವರಗಳ ಮರು ಪರಿಶೀಲನೆ’

● ವಿಕ್ರಮ ವಾಹಿನಿ | ಬೆಂಗಳೂರು

ಉದ್ಯಾನಗಳಲ್ಲಿ ಶೇ.5ರಷ್ಟು ಜಾಗ ನೀಡುವ ಈ ಪ್ರಸ್ತಾವನೆ ಏಕೆ ಬಂತು, ಹಿಂದಿನವರು ಏನು ಮಾಡಿದ್ದಾರೆ, ಯಾವ ಜಾಗವನ್ನು ಯಾರಿಗೆ ನೀಡಿದ್ದಾರೆ ಎಂಬುದನ್ನು ಪರಿಶೀಲಿಸುತ್ತೇನೆ. ಕಡತ ತರಿಸಿಕೊಂಡು ವಿಧಾನಸಭೆಯಲ್ಲಿ ಮತ್ತೆ ಚರ್ಚಿಸಬಹುದು’ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಲಾಲ ಭಾಗ್ ನಲ್ಲಿ ಮೆಟ್ರೋಗೆ ಜಾಗ ನೀಡಿರುವುದು ಸೇರಿದಂತೆ ಬೆಂಗಳೂರಿನ ವಿವಿಧೆಡೆ ಜಾಗ ನೀಡಿರುವ ವಿಚಾರಗಳನ್ನೂ ಪರಿಶೀಲಿಸಬೇಕಿದೆ ಎಂದು ಹೇಳಿದರು.

ಬೆಂಗಳೂರಿನ ಉದ್ಯಾನಗಳ ಜಾಗಕ್ಕೆ ಸಂಬಂಧಿಸಿದಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ‘ಯಾರೂ ಆತಂಕಪಡುವ ಅಗತ್ಯವಿಲ್ಲ. ಪಾರ್ಕ್ ಜಾಗವನ್ನು ಹೇಗೆ ರಕ್ಷಿಸಬೇಕು ಎಂಬುದು ನನಗೆ ಗೊತ್ತಿದೆ’ ಎಂದರು.

ಲಾಲ್ ಭಾಗ್ ಸೇರಿದಂತೆ ಉದ್ಯಾನಗಳ ಜಾಗದ ಕುರಿತು ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ಏನೇನು ಕ್ರಮ ಕೈಗೊಳ್ಳಲಾಗಿದೆ ಎಂಬ ಸಂಪೂರ್ಣ ಮಾಹಿತಿಯನ್ನು ಪಡೆದು ಪರಿಶೀಲಿಸುವುದಾಗಿ ಹೇಳಿದರು. ಈ ವಿಚಾರವನ್ನು ವಿಧಾನಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಲು ಅವಕಾಶ ಕಲ್ಪಿಸುವುದಾಗಿಯೂ ತಿಳಿಸಿದರು.

ಪ್ರತಿಪಕ್ಷದ ಸಲಹೆಗಳಿಗೆ ನಾನು ಮುಕ್ತವಾಗಿದ್ದೇನೆ. ಸಾರ್ವಜನಿಕರ ಸಲಹೆಗಳನ್ನೂ ಪರಿಗಣಿಸುತ್ತೇನೆ. ಯಾವುದೇ ಗೊಂದಲ ಸೃಷ್ಟಿಸುವುದು ನನ್ನ ಉದ್ದೇಶವಲ್ಲ. ಸಾರ್ವಜನಿಕರ ದೊಡ್ಡ ಹಿತದೃಷ್ಟಿಯಿಂದಲೇ ನಿರ್ಧಾರ ಕೈಗೊಳ್ಳಲಾಗುವುದು’ ಎಂದು ಸ್ಪಷ್ಟಪಡಿಸಿದರು.



ರಾಜ್ಯದಲ್ಲಿ ಈಗಾಗಲೇ ಉಪಮುಖ್ಯಂತ್ರಿ ಡಾ. ಜಿ.ಪರಮೇಶ್ವರ್ ಅವರು 102 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದಾರೆ. ಇನ್ನೂ ಕೆಲವು ತಾಲೂಕುಗಳ ಕುರಿತು ಪರಿಶೀಲನೆ ನಡೆಯುತ್ತಿದ್ದು, ಪ್ರತಿ ತಾಲೂಕಿನಿಂದ ನಿರಂತರವಾಗಿ ವರದಿ ಪಡೆದು, ನಿಯಮಾನುಸಾರ ಪರಿಶೀಲನೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಶಿವಕುಮಾರ್ ಅವರು ತಿಳಿಸಿದರು.

ಕೇಂದ್ರ ಸರಕಾರದ ತಂಡ ರಾಜ್ಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಬರ ಪರಿಸ್ಥಿತಿ ಕುರಿತು ಸಮಗ್ರವಾಗಿ ಸಮರ್ಥನೆ ಮಾಡಿಕೊಳ್ಳಬೇಕಿರುವುದರಿಂದ ಬರ ಘೋಷಣೆಯ ಪ್ರಕ್ರಿಯೆಯಲ್ಲಿ ಯಾವುದೇ ತಾಂತ್ರಿಕ ಲೋಪವಾಗದಂತೆ ಎಚ್ಚರಿಕೆ ವಹಿಸಲಾಗುತ್ತಿದೆ ಎಂದು ಹೇಳಿದರು.

ಧಾರವಾಡ, ಗದಗ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಬರ ಘೋಷಣೆಗೆ ಸಂಬಂಧಿಸಿದಂತೆ ಮಾಹಿತಿ ಕೊರತೆ ಕಂಡುಬಂದ ಹಿನ್ನೆಲೆಯಲ್ಲಿ ಅಧಿಕಾರಿಗಳಿಂದ ವರದಿ ಪಡೆಯಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸ್ವತಃ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿರುವುದಾಗಿ ತಿಳಿಸಿದ ಅವರು, ಬಾಗಲಕೋಟೆಗೂ ಭೇಟಿ ನೀಡುವುದಾಗಿ ಹೇಳಿದರು.

ಯಾವ ತಾಲೂಕಿನಲ್ಲಿ, ಯಾವ ಜಿಲ್ಲೆಯಲ್ಲಿ ನಿಜವಾಗಿಯೂ ಬರ ಪರಿಸ್ಥಿತಿ ಉಂಟಾಗಿದೆಯೋ ಅದನ್ನು ಪರಿಶೀಲಿಸುತ್ತೇವೆ. ನನಗೆ ನನ್ನದೇ ಕ್ಷೇತ್ರ ಎಂಬ ಯಾವುದೇ ಪ್ರಶ್ನೆಯಿಲ್ಲ. ಬರ ಘೋಷಣೆಗೆ ಕೇಂದ್ರ ಸರಕಾರದ ನಿಯಮಗಳಿವೆ. ಕಂದಾಯ ಇಲಾಖೆ, ಕೃಷಿ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳು ಒಟ್ಟಾಗಿ ಪರಿಶೀಲನೆ ನಡೆಸಿ, ನಿಯಮದ ಪ್ರಕಾರವೇ ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಲಾಗುತ್ತದೆ’ ಎಂದು ಸ್ಪಷ್ಟಪಡಿಸಿದರು.

**ರಾಹುಲ್ ವಿರುದ್ಧ ಎಫ್ಐಆರ್ ಗೆ ಖಂಡನೆ**

ರಾಹುಲ್ ಗಾಂಧಿ ವಿರುದ್ಧ ಎಫ್ಐಆರ್ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಇದನ್ನು ರಾಜಕೀಯ ಪ್ರೇರಿತ ಕ್ರಮ ಎಂದು ಎಂದು ಹೇಳಿದರು.

‘ರಾಹುಲ್ ಗಾಂಧಿ ಅವರು ತಪ್ಪೇನು ಮಾಡಿದ್ದಾರೆ ? ಯುವಜನತೆ ಮತ್ತು ದೇಶಕ್ಕಾಗಿ ಹೋರಾಡುವುದು ಅವರ ಹಕ್ಕು. ಅದು ಸಂವಿಧಾನ ನೀಡಿರುವ ಹಕ್ಕು. ಅವರು ಹೋರಾಡುತ್ತಿರುವ ವಿಚಾರದಲ್ಲಿ ನಾವೆಲ್ಲರೂ ಅವರೊಂದಿಗೆ ಇದ್ದೇವೆ’ ಎಂದು ಹೇಳಿದರು.

ಬಿಜೆಪಿ ಪಾದಯಾತ್ರೆಗೆ ಪಕ್ಷದ ಪ್ರತಿತಂತ್ರ

ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಕುರಿತು, ‘ಅವರು ಪಾದಯಾತ್ರೆ ಮಾಡುವುದು ಒಳ್ಳೆಯದೇ. ಅವರು ನೀಡುತ್ತಿರುವುದು ನಮಗೆ ಒಳ್ಳೆಯ ಅವಕಾಶ. ಅದಕ್ಕೆ ಬೇಕಾದ ಪ್ರತಿತಂತ್ರ ರೂಪಿಸಲು ನಮ್ಮ ಪಕ್ಷವೂ ಸಿದ್ಧವಿದೆ’ ಎಂದು ಹೇಳಿದರು.

# ಕೆಪಿಎಸ್‌ಸಿ ಪರೀಕ್ಷೆ: ಅರ್ಜಿ ಗಡುವು ಸೆ.7ರವರೆಗೆ ವಿಸ್ತರಣೆ

● ವಿಕ್ರಮ ವಾಹಿನಿ | ಬೆಂಗಳೂರು

2026–27ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 319 ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿದ್ದ ಕೊನೆಯ ದಿನಾಂಕವನ್ನು ಸೆಪ್ಟೆಂಬರ್ 7, 2026ರವರೆಗೆ ವಿಸ್ತರಿಸಿ ಕರ್ನಾಟಕ ಲೋಕಸೇವಾ ಆಯೋಗ ಅಧಿಕೃತ ಪ್ರಕಟಣೆ ಹೊರಡಿಸಿದೆ.

ಕರ್ನಾಟಕ ಲೋಕಸೇವಾ ಆಯೋಗವು ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 319 ಹುದ್ದೆಗಳಿಗೆ (ಉಳಿಕೆ ಮೂಲ ವೃಂದ 297 + ಹೈದ್ರಾಬಾದ್–ಕರ್ನಾಟಕ ವೃಂದ 22) ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ 31–07–2026ರಂದು ಅಧಿಸೂಚನೆ ಹೊರಡಿಸಿತ್ತು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಗಸ್ಟ್ 1 ರಿಂದ ಆಗಸ್ಟ್ 31, 2026 ರವರೆಗೆ ಕಾಲಾವಕಾಶ ನೀಡಲಾಗಿತ್ತು.

ಆದರೆ, ಇತ್ತೀಚೆಗೆ ನಾಡಕಛೇರಿ ಹಾಗೂ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಾಂತ್ರಿಕ ಸರ್ವರ್ ಸಮಸ್ಯೆಗಳು ಎದುರಾಗಿದ್ದರಿಂದ ಜಾತಿ, ಆದಾಯ ಹಾಗೂ ಒಳ ಮೀಸಲಾತಿ ಪ್ರಮಾಣ ಪತ್ರಗಳನ್ನು ಸಮಯಕ್ಕೆ ಸರಿಯಾಗಿ ಪಡೆಯಲು ಅಭ್ಯರ್ಥಿಗಳಿಗೆ ಸಾಧ್ಯವಾಗಿರಲಿಲ್ಲ. ಜೊತೆಗೆ ಗ್ರಾಮೀಣ ಭಾಗದ ಅಭ್ಯರ್ಥಿಗಳಿಗೆ ಇಂಟರ್‌ನೆಟ್ ಸಂಪರ್ಕದ ಕೊರತೆಯಿಂದಾಗಿ ಶುಲ್ಕ ಪಾವತಿಯಲ್ಲಿ ವೈಫಲ್ಯ ಉಂಟಾಗಿತ್ತು. ಈ ಎಲ್ಲಾ ಕಾರಣಗಳಿಂದಾಗಿ ಅನೇಕ ಅಭ್ಯರ್ಥಿಗಳು ನಿಗದಿತ ಅವಧಿಯಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಲು ಸಾಧ್ಯವಾಗದೆ, ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕವನ್ನು ವಿಸ್ತರಿಸುವಂತೆ ಆಯೋಗಕ್ಕೆ ಮನವಿ ಮಾಡಿಕೊಂಡಿದ್ದರು.

ಅಭ್ಯರ್ಥಿಗಳಿಂದ ಬಂದ ಮನವಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಲೋಕಸೇವಾ ಆಯೋಗವು, ಅಭ್ಯರ್ಥಿಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 07–09–2026ರವರೆಗೆ ವಿಸ್ತರಿಸಿ ಆದೇಶಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಜ್ಯೋತಿ ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರದ ವೈಫಲ್ಯ ವಿರೋಧಿಸಿ ಬಿಜೆಪಿ ಪಾದಯಾತ್ರೆ ಆರಂಭ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಸರ್ಕಾರದ ವೈಫಲ್ಯಗಳನ್ನು ವಿರೋಧಿಸಿ, ಬಿಜೆಪಿ ರಾಯಚೂರಿನಿಂದ ಬಳ್ಳಾರಿವರೆಗೆ ಹಮ್ಮಿಕೊಂಡಿರುವ ಪಾದಯಾತ್ರೆ ಕಾರ್ಯಕ್ರಮಕ್ಕೆ ಲಿಂಗಸುಗೂರುನಲ್ಲಿಂದು ಕಹಳೆ ಮೊಳಗಿಸುವ ಮೂಲಕ ಚಾಲನೆ ನೀಡಲಾಯಿತು.

ಈ ವೇಳೆ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನ ಮಂಡಲದ ಉಭಯ ಸದನಗಳ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ, ಛಲವಾದಿ ನಾರಾಯಣಸ್ವಾಮಿ, ಸಂಸದರಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ ಸೇರಿದಂತೆ ಪಕ್ಷದ ಶಾಸಕರು ಹಾಗೂ ಹಿರಿಯ ಮುಖಂಡರು ಉಪಸ್ಥಿತರಿದ್ದರು.

ಬಳಿಕ ಬಿ.ವೈ. ವಿಜಯೇಂದ್ರ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರ, ರೈತ ವಿರೋಧಿ, ಜನವಿರೋಧಿ ಹಾಗೂ ಪ್ರಗತಿ ವಿರೋಧಿಯ ಜೊತೆಗೆ ಭ್ರಷ್ಟಾಚಾರದಲ್ಲಿ ನಿರತವಾಗಿದೆ. ಇಂತಹ ಸರ್ಕಾರವನ್ನು ಅಧಿಕಾರದಿಂದ ಕೆಳಗಿಸುವ ತನಕ ಹೋರಾಟ ಮುಂದುವರೆಯಲಿದೆ ಎಂದು ಹೇಳಿದರು. ಆರ್. ಅಶೋಕ ಮಾತನಾಡಿ, ರಾಜ್ಯದ 175 ತಾಲೂಕುಗಳಲ್ಲಿ ಬರ ಪರಿಸ್ಥಿತಿ ಇದ್ದರೂ ರಾಜ್ಯಸರ್ಕಾರ 102 ತಾಲೂಕುಗಳನ್ನಷ್ಟೇ ಬರ ಪೀಡಿತ ಎಂದು ಘೋಷಿಸಿದೆ. ಉಳಿದ ಎಲ್ಲ ತಾಲೂಕುಗಳನ್ನು ಬರಪೀಡಿತ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ. ರಾಜ್ಯ ಸರ್ಕಾರದ ವೈಫಲ್ಯ ವಿರೋಧಿಸಿ, ರಾಯಚೂರಿನಿಂದ ಬಳ್ಳಾರಿವರೆಗೆ 10 ದಿನಗಳ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಸರ್ಕಾರದ ಜನ ವಿರೋಧಿ ನೀತಿಗಳ ಬಗ್ಗೆ ಅರಿವು ಮೂಡಿಸಲಾಗುವುದು ಎಂದು ತಿಳಿಸಿದರು.


# ಬೆಳಗಾವಿಯಲ್ಲಿ ಪೊಲೀಸ್ ಶ್ವಾನಗಳ ಸ್ಪರ್ಧೆ

● ವಿಕ್ರಮ ವಾಹಿನಿ | ಬೆಳಗಾವಿ

ಅಪರಾಧ ಪ್ರಕರಣಗಳ ತನಿಖೆ ಹಾಗೂ ಪತ್ತೆಯಲ್ಲಿ ಪ್ರಮುಖ ಪಾತ್ರ ವಹಿಸುವ ಪೊಲೀಸ್ ಶ್ವಾನಗಳ ತರಬೇತಿ ಮತ್ತು ಕಾರ್ಯಕ್ಷಮತೆ ಪರೀಕ್ಷಿಸುವ ವಿಶೇಷ ಸ್ಪರ್ಧೆ ಸೋಮವಾರ ಬೆಳಗಾವಿಯಲ್ಲಿ ಗಮನ ಸೆಳೆಯಿತು.

ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಸ್ಪರ್ಧೆಯಲ್ಲಿ ಉತ್ತರ ವಲಯ ವ್ಯಾಪ್ತಿಯ ಬೆಳಗಾವಿ, ವಿಜಯಪುರ, ಬಾಗಲಕೋಟೆ, ಹಾವೇರಿ, ಹುಬ್ಬಳ್ಳಿ–ಧಾರವಾಡ ಹಾಗೂ ಗದಗ ಜಿಲ್ಲೆಗಳ 18ಕ್ಕೂ ಹೆಚ್ಚು ಪೊಲೀಸ್ ಶ್ವಾನಗಳು ಪಾಲ್ಗೊಂಡಿದ್ದವು.

ಮುಧೋಳ, ಜರ್ಮನ್ ಶೆಫರ್ಡ್, ಲ್ಯಾಬ್ರಡಾರ್ ಹಾಗೂ ಬೆಲ್ಜಿಯನ್ ಮೆಲಿನಾಯಿಸ್ ಸೇರಿದಂತೆ ವಿವಿಧ ತಳಿಯ ಶ್ವಾನಗಳು ತಮ್ಮ ತರಬೇತಿ ಸಾಮರ್ಥ್ಯವನ್ನು ಪ್ರದರ್ಶಿಸಿದವು. ತರಬೇತುದಾರರ ಸೂಚನೆಗಳನ್ನು ನಿಖರವಾಗಿ ಪಾಲಿಸುವುದು, ವಾಸನೆಯ ಮೂಲಕ ವಸ್ತು ಹಾಗೂ ವ್ಯಕ್ತಿಗಳನ್ನು ಪತ್ತೆಹಚ್ಚುವುದು ಸೇರಿದಂತೆ ಹಲವು ಕೌಶಲ್ಯಗಳನ್ನು ಪರೀಕ್ಷಿಸಲಾಯಿತು.



ಓಬಿಡಿಯನ್ಸ್, ವಾಸನೆ ಪತ್ತೆ, ಬಾಡಿ ಸರ್ಚಿಂಗ್, ನಾರ್ಕೋಟಿಕ್ಸ್ ಪತ್ತೆ, ಟ್ರ್ಯಾಕಿಂಗ್ ಹಾಗೂ ಗ್ರೌಂಡ್ ಸರ್ಚಿಂಗ್ ವಿಭಾಗಗಳಲ್ಲಿ ಕಠಿಣ ಪರೀಕ್ಷೆ ನಡೆಸಲಾಯಿತು. ಅಪರಾಧ ಸ್ಥಳದಲ್ಲಿ ಸುಳಿವು ಪತ್ತೆಹಚ್ಚುವುದು, ಮಾದಕ ವಸ್ತುಗಳನ್ನು ಗುರುತಿಸುವುದು ಹಾಗೂ ನಿರ್ದಿಷ್ಟ ವಾಸನೆಯನ್ನು ಅನುಸರಿಸಿ ಗುರಿ ತಲುಪುವ ಸಾಮರ್ಥ್ಯವನ್ನು ಅಧಿಕಾರಿಗಳು ಪರಿಶೀಲಿಸಿದರು.

ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿದ ಶ್ವಾನಗಳು ಹಾಗೂ ಅವುಗಳ ತರಬೇತುದಾರರಿಗೆ ಬಹುಮಾನ ಮತ್ತು ಪ್ರಶಸ್ತಿ ಪ್ರದಾನ ಮಾಡಲಾಯಿತು. ಅಪರಾಧ ತನಿಖೆ, ಮಾದಕ ವಸ್ತುಗಳ ಪತ್ತೆ ಹಾಗೂ ವಿವಿಧ ಪ್ರಕರಣಗಳ ಸುಳಿವು ಪತ್ತೆಹಚ್ಚುವಲ್ಲಿ ಪೊಲೀಸ್ ಶ್ವಾನಗಳ ಮಹತ್ವವನ್ನು ಸ್ಪರ್ಧೆ ಮತ್ತೊಮ್ಮೆ ಎತ್ತಿ ತೋರಿಸಿತು.

# ವಿದ್ಯಾರ್ಥಿನಿ ಮೇಲೆ ಸಾಮೂಹಿಕ ಅತ್ಯಾಚಾರ; ಇಬ್ಬರ ಬಂಧನ

● ವಿಕ್ರಮ ವಾಹಿನಿ | ಔರಂಗಾಬಾದ್ (ಬಿಹಾರ)

ಚಲಿಸುತ್ತಿದ್ದ ಕಾರಿನೊಳಗೆ ಅಪ್ರಾಪ್ತ ವಿದ್ಯಾರ್ಥಿನಿಯೊಬ್ಬಳ ಮೇಲೆ ಮೂವರು ಯುವಕರು ಸಾಮೂಹಿಕ ಅತ್ಯಾಚಾರ ಎಸಗಿರುವ ಆರೋಪ ಕೇಳಿಬಂದಿದೆ. ಸುಮಾರು ಆರು ಗಂಟೆಗಳ ಕಾಲ ಸಂತ್ರಸ್ತೆಯನ್ನು ಕಾರಿನಲ್ಲೇ ಇರಿಸಿಕೊಂಡಿದ್ದ ಆರೋಪಿಗಳು ಬಳಿಕ ಆಕೆಯನ್ನು ಗ್ರಾಮದ ಸಮೀಪ ಬಿಟ್ಟು ಪರಾರಿಯಾಗಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದು, ಮತ್ತೊಬ್ಬ ಆರೋಪಿಗಾಗಿ ಶೋಧ ಮುಂದುವರಿಸಿದ್ದಾರೆ.

ಪೊಲೀಸರ ಪ್ರಕಾರ, ಬಂಧಿತರಲ್ಲಿ ಒಬ್ಬನಿಗೆ ಸಂತ್ರಸ್ತೆಯ ಪರಿಚಯವಿತ್ತು. ಆತ ಮೊಬೈಲ್ ಮೂಲಕ ಕರೆ ಮಾಡಿ ವಿದ್ಯಾರ್ಥಿನಿಯನ್ನು ಮನೆಯಿಂದ ಹೊರಗೆ ಕರೆಸಿಕೊಂಡಿದ್ದಾನೆ. ಬಳಿಕ ಆಕೆಯನ್ನು ಕಾರಿನಲ್ಲಿ ಕರೆದೊಯ್ದು ಕುಟುಂಬ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರದೇಶದಲ್ಲಿ ಮೂವರು ಆರೋಪಿಗಳು ಅತ್ಯಾಚಾರ ಎಸಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಘಟನೆ ತಿಳಿದ ಬಳಿಕ ಸಂತ್ರಸ್ತೆಯ ಕುಟುಂಬಸ್ಥರು ಮೊದಲು ಮಾಲಿ ಪೊಲೀಸ್ ಠಾಣೆಗೆ ತೆರಳಿದ್ದು, ನಂತರ ಘಟನೆ ನಡೆದ ಕುಟುಂಬ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಆರಂಭಿಸಿ ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತರು ಮಾಲಿ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಗಳಾಗಿದ್ದು, ಮೂರನೇ ಆರೋಪಿ ತಲೆಮರೆಸಿಕೊಂಡಿದ್ದಾನೆ.

ಮಾಹಿತಿ ಲಭ್ಯವಾದ ಕೂಡಲೇ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ತಲೆಮರೆಸಿಕೊಂಡಿರುವ ಮೂರನೇ ಆರೋಪಿಯ ಬಂಧನಕ್ಕಾಗಿ ಶೋಧ ಕಾರ್ಯ ಮುಂದುವರಿದಿದ್ದು, ಪ್ರಕರಣದ ಕುರಿತು ಕೂಲಂಕಷ ತನಿಖೆ ನಡೆಸಲಾಗುತ್ತಿದೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಆದಿತ್ಯ ಕುಮಾರ್ ತಿಳಿಸಿದ್ದಾರೆ.

ಸಂತ್ರಸ್ತೆಯ ವೈದ್ಯಕೀಯ ಪರೀಕ್ಷೆಯನ್ನು ಔರಂಗಾಬಾದ್‌ನ ಸದರ್ ಆಸ್ಪತ್ರೆಯಲ್ಲಿ ನಡೆಸಲಾಗಿದೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

ಪ್ರಕರಣದ ತನಿಖೆಯ ಭಾಗವಾಗಿ ಪೊಲೀಸರು ಸಂತ್ರಸ್ತೆಯ ಹೇಳಿಕೆಯನ್ನು ದಾಖಲಿಸಿಕೊಂಡಿದ್ದು, ಘಟನೆಯ ಸಂದರ್ಭ, ಆರೋಪಿಗಳ ಚಲನವಲನ ಹಾಗೂ ಬಳಸಲಾದ ವಾಹನದ ಕುರಿತು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಸಂತ್ರಸ್ತೆಗೆ ಅಗತ್ಯ ಭದ್ರತೆ ಹಾಗೂ ನೆರವು ಒದಗಿಸುವ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ತನಿಖಾಧಿಕಾರಿ ಸೋಗಿನಲ್ಲಿ ವಂಚನೆ: 64ರ ಆರೋಪಿ ಬಂಧನ

● ವಿಕ್ರಮ ವಾಹಿನಿ | ಮಂಗಳೂರು

ರಾಷ್ಟ್ರೀಯ ಅಪರಾಧ ತನಿಖಾ ದಳದ ಅಧಿಕಾರಿ ಎಂದು ಹೇಳಿಕೊಂಡು ಜನರನ್ನು ಬೆದರಿಸಿ ಹಣ ವಸೂಲಿ ಮಾಡುತ್ತಿದ್ದ ಆರೋಪದ ಮೇಲೆ 64 ವರ್ಷದ ಸ್ಯಾಮ್ ಪೀಟರ್ ಅಲಿಯಾಸ್ ಡ್ಯಾನಿ ತರಕನ್‌ನನ್ನು ಮಂಗಳೂರು ನಗರ ಅಪರಾಧ ವಿಭಾಗದ ಪೊಲೀಸರು ಬಂಧಿಸಿದ್ದಾರೆ.

ಆರೋಪಿಯು ಸಹಚರರೊಂದಿಗೆ ಸೇರಿ ತನಿಖಾ ಸಂಸ್ಥೆಗಳ ಅಧಿಕಾರಿಗಳಂತೆ ನಟಿಸಿ ಆರ್ಥಿಕ, ಬ್ಯಾಂಕ್ ಹಾಗೂ ತೆರಿಗೆ ವಂಚನೆ ಪ್ರಕರಣಗಳಲ್ಲಿ ಸಿಲುಕಿದ್ದವರನ್ನು ಗುರಿಯಾಗಿಸಿಕೊಂಡು ಹಣ ವಸೂಲಿ ಮಾಡುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. 2019ರಲ್ಲಿ ಬಂಧನಕ್ಕೊಳಗಾಗಿ ಜಾಮೀನು ಪಡೆದ ಬಳಿಕ ನ್ಯಾಯಾಲಯಕ್ಕೆ ಹಾಜರಾಗದೆ ತಲೆಮರೆಸಿಕೊಂಡಿದ್ದ ಎನ್ನಲಾಗಿದೆ.

ಆತನ ವಿರುದ್ಧ ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಸುಮಾರು 17 ವಂಚನೆ ಪ್ರಕರಣಗಳು ದಾಖಲಾಗಿದ್ದು, ಹಲವು ಬಂಧನ ವಾರಂಟ್‌ಗಳು ಜಾರಿಯಾಗಿದ್ದವು. 2001ರಲ್ಲಿ ಆತನ ವಿರುದ್ಧ ಅಂತಾರಾಷ್ಟ್ರೀಯ ಪೊಲೀಸ್ ಸಂಸ್ಥೆಯಿಂದ ಕೆಂಪು ಎಚ್ಚರಿಕೆ ಪ್ರಕಟಣೆಯೂ ಹೊರಡಿಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ಚಿನ ತನಿಖೆ ಮುಂದುವರಿದಿದೆ.

# ಪಿಒಪಿ ಗಣೇಶ ಮೂರ್ತಿಗೆ ಸಂಪೂರ್ಣ ನಿಷೇಧ



● ವಿಕ್ರಮ ವಾಹಿನಿ | ಬೆಂಗಳೂರು

ಗೌರಿ–ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಹಾಗೂ ಶಾಂತಿಯುತವಾಗಿ ಆಚರಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಜಿಬಿಎ) ಮತ್ತು ಬೆಂಗಳೂರು ನಗರ ಪೊಲೀಸ್ ಇಲಾಖೆ ಸಿದ್ಧತೆ ಕೈಗೊಂಡಿವೆ. ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ)ನಿಂದ ತಯಾರಿಸಿದ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಸಂಪೂರ್ಣ ನಿಷೇಧವಿದ್ದು, ಸಾರ್ವಜನಿಕರು ಪರಿಸರ ಸ್ನೇಹಿ ಮೂರ್ತಿಗಳನ್ನೇ ಬಳಸಬೇಕು ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮನವಿ ಮಾಡಿದರು.

ಗಣೇಶೋತ್ಸವದ ಹಿನ್ನೆಲೆಯಲ್ಲಿ ಟೌನ್‌ಹಾಲ್‌ನಲ್ಲಿ ನಡೆದ ‘ಶಾಂತಿ ಸೌಹಾರ್ದತೆ’ ಸಭೆಯಲ್ಲಿ ಮಾತನಾಡಿದ ಅವರು, ಗಣೇಶೋತ್ಸವ ಸುಸೂತ್ರವಾಗಿ ನಡೆಯಲು ಪಾಲಿಕೆ, ಪೊಲೀಸ್, ಬೆಸ್ಕಾಂ ಹಾಗೂ ಅಗ್ನಿಶಾಮಕ ಇಲಾಖೆಗಳ ಸಮನ್ವಯದಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು. ಪೊಲೀಸ್ ಠಾಣಾವಾರು ಅಧಿಕಾರಿಗಳ ಸಭೆ ನಡೆಸಿ ಸ್ಥಳೀಯ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸಲಾಗುವುದು ಎಂದು ತಿಳಿಸಿದರು.

ಕೆರೆಗಳ ಬಳಿಯ ಕಲ್ಯಾಣಿ ಹಾಗೂ ವಿಸರ್ಜನಾ ಕೇಂದ್ರಗಳಲ್ಲಿ ಅಗತ್ಯ ವ್ಯವಸ್ಥೆ ಕಲ್ಪಿಸಲಾಗುವುದು. ವಿಸರ್ಜನೆಗೆ ತಡವಾಗಿ ಬಂದರೂ ಅವಕಾಶ ನೀಡಲು ಸಿಬ್ಬಂದಿ ನಿಯೋಜಿಸಲಾಗುವುದು. ಅಗತ್ಯವಿದ್ದಲ್ಲಿ ಇತರ ಸ್ಥಳಗಳಲ್ಲಿಯೂ ವಿಸರ್ಜನಾ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮಹೇಶ್ವರ್ ರಾವ್ ಹೇಳಿದರು.

**ಐದು ಕಡೆ ಏಕಗವಾಕ್ಷಿ ಕೇಂದ್ರ**

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅಗತ್ಯ ಅನುಮತಿಗಳನ್ನು ಸುಲಭವಾಗಿ ಪಡೆಯಲು ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಉಪವಿಭಾಗ ಕಚೇರಿಗಳಲ್ಲಿ ಏಕಗವಾಕ್ಷಿ ಕೇಂದ್ರಗಳನ್ನು ತೆರೆಯಲಾಗುವುದು. ಪಾಲಿಕೆ, ಪೊಲೀಸ್, ಬೆಸ್ಕಾಂ ಹಾಗೂ ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ಇಲ್ಲಿ ಲಭ್ಯವಿರಲಿದ್ದು, ಕೇಂದ್ರಗಳ ವಿಳಾಸ ಹಾಗೂ ನೋಡಲ್ ಅಧಿಕಾರಿಗಳ ವಿವರಗಳನ್ನು ಪಾಲಿಕೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದರು.

ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮಾತನಾಡಿ, ಗಣೇಶೋತ್ಸವದ ಸಂದರ್ಭದಲ್ಲಿ 24 ಗಂಟೆಯೂ ಪೊಲೀಸ್ ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದು, ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು. ಮೆರವಣಿಗೆ ನಿಗದಿತ ಸಮಯಕ್ಕೆ ಆರಂಭವಾಗಬೇಕು. ಸಂಚಾರಕ್ಕೆ ತೊಂದರೆಯಾಗದಂತೆ ನಿಗದಿತ ಮಾರ್ಗ ಹಾಗೂ ಸಮಯವನ್ನು ಪಾಲಿಸಬೇಕು ಎಂದು ಸಂಘಟಕರಿಗೆ ಸೂಚಿಸಿದರು.

ಮೆರವಣಿಗೆಯಲ್ಲಿ ಮದ್ಯಪಾನ ಮಾಡಿ ಭಾಗವಹಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದಂತೆ ಸಂಘಟಕರು ಹಾಗೂ ಸ್ವಯಂಸೇವಕರು ಪೊಲೀಸರೊಂದಿಗೆ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಮೆರವಣಿಗೆ ಮಾರ್ಗದಲ್ಲಿನ ರಸ್ತೆ ದುರಸ್ತಿ, ವಿದ್ಯುತ್ ದೀಪಗಳ ವ್ಯವಸ್ಥೆ, ಮರದ ಕೊಂಬೆಗಳ ತೆರವು, ಅನಧಿಕೃತ ಕೇಬಲ್‌ಗಳ ತೆರವು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಂಬಂಧಿಸಿದ ಇಲಾಖೆಗಳ ಸಹಯೋಗದಲ್ಲಿ ಕಲ್ಪಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ವಿಸರ್ಜನಾ ಕೇಂದ್ರಗಳನ್ನು ಸ್ಥಾಪಿಸುವುದು, ಪಿಒಪಿ ಮೂರ್ತಿಗಳ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು, ಧ್ವನಿವರ್ಧಕ ಬಳಕೆಯ ನಿಯಮ ಪಾಲನೆ, ವಿದ್ಯುತ್ ಅವಘಡ ತಡೆ, ಮೆರವಣಿಗೆ ವೇಳೆ ಸಂಚಾರ ನಿಯಂತ್ರಣ ಹಾಗೂ ವಿಸರ್ಜನೆಯ ಬಳಿಕ ತ್ವರಿತ ಸ್ವಚ್ಛತಾ ಕಾರ್ಯ ಕೈಗೊಳ್ಳುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಸಂಚಾರಿ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ, ಜಿಬಿಎ ಅಪರ ಆಯುಕ್ತರಾದ ಆರ್. ಲತಾ, ನವೀನ್ ಕುಮಾರ್ ರಾಜು ಸೇರಿದಂತೆ ಪಾಲಿಕೆ, ಬೆಸ್ಕಾಂ, ಮಾಲಿನ್ಯ ನಿಯಂತ್ರಣ ಮಂಡಳಿ, ಪೊಲೀಸ್ ಮತ್ತು ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ಹಾಗೂ ಗಣೇಶೋತ್ಸವ ಸಮಿತಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಮದ್ಯ ಸೇವಿಸಿ ಗಲಾಟೆ: 50 ಗಿಡ ನೆಡುವ ಶಿಕ್ಷೆ

● ವಿಕ್ರಮ ವಾಹಿನಿ | ಚಿಕ್ಕೋಡಿ (ಬೆಳಗಾವಿ)

ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವಿಸಿ ಗಲಾಟೆ ಮಾಡಿ ಶಾಂತಿಗೆ ಭಂಗ ತಂದ ವ್ಯಕ್ತಿಗೆ ಚಿಕ್ಕೋಡಿಯ ಜೆಎಂಎಫ್‌ಸಿ ನ್ಯಾಯಾಲಯ ಪರಿಸರ ಸ್ನೇಹಿ ಶಿಕ್ಷೆ ವಿಧಿಸಿದೆ.

ಯಕ್ಸಂಬಾ ಗ್ರಾಮದ ಅನಿಲ ನಿಂಗಪ್ಪ ಪೂಜಾರಿ (31) ಮನೆಯ ಮುಂದಿನ ಸಾರ್ವಜನಿಕ ರಸ್ತೆಯಲ್ಲಿ ಮದ್ಯ ಸೇವಿಸಿ, ಸಾರ್ವಜನಿಕರಿಗೆ ತೊಂದರೆ ಉಂಟುಮಾಡಿದ್ದ. ಈ ಸಂಬಂಧ ಸದಾಲಗಾ ಪೊಲೀಸರು ಪ್ರಕರಣ ದಾಖಲಿಸಿದ್ದರು. ವಿಚಾರಣೆ ವೇಳೆ ಆರೋಪಿ ತನ್ನ ತಪ್ಪನ್ನು ಸ್ವಯಂಪ್ರೇರಿತವಾಗಿ ಒಪ್ಪಿಕೊಂಡು ಕ್ಷಮೆಯಾಚಿಸಿದ್ದಾನೆ.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಜಹೀರ ಅತನೂರ್ ಅವರು ಆರೋಪಿಗೆ 1,000 ದಂಡ ವಿಧಿಸುವುದರ ಜೊತೆಗೆ ಸಮುದಾಯ ಸೇವೆಯಾಗಿ 50 ಗಿಡಗಳನ್ನು ನೆಡುವಂತೆ ಆದೇಶಿಸಿದ್ದಾರೆ.

ಚಿಕ್ಕೋಡಿ ನ್ಯಾಯಾಲಯದ ಆವರಣದಲ್ಲಿ 25 ಹಾಗೂ ಸದಾಲಗಾ ಪೊಲೀಸ್ ಠಾಣೆ ಆವರಣದಲ್ಲಿ 25 ಗಿಡಗಳನ್ನು ನೆಡಬೇಕು. ಗಿಡ ನೆಡಲು ವಿಫಲವಾದರೆ 30 ದಿನಗಳ ಸಾದಾ ಜೈಲು ಶಿಕ್ಷೆ ಅನುಭವಿಸಬೇಕೆಂದು ನ್ಯಾಯಾಲಯ ಎಚ್ಚರಿಸಿದೆ.



ನ್ಯಾಯಾಲಯದ ಆದೇಶದ ಬಳಿಕ ಅನಿಲ ಪೂಜಾರಿ 1,000 ದಂಡ ಪಾವತಿಸಿ, ನ್ಯಾಯಾಲಯ ಹಾಗೂ ಪೊಲೀಸ್ ಠಾಣೆ ಆವರಣದಲ್ಲಿ ಸ್ವತಃ ಸಸಿ ನೆಟ್ಟು ಶಿಕ್ಷೆಯನ್ನು ಪಾಲಿಸಿದರು. ಅಪರಾಧಕ್ಕೆ ದಂಡದ ಜತೆಗೆ ಪರಿಸರ ಸಂರಕ್ಷಣೆಯ ಸಂದೇಶ ನೀಡಿದ ನ್ಯಾಯಾಲಯದ ತೀರ್ಪಿಗೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

# ನೇಪಾಳ ಸಂತ್ರಸ್ತರಿಗೆ ಶೃಂಗೇರಿ ಪೀಠದ ನೆರವು

● ವಿಕ್ರಮ ವಾಹಿನಿ | ಚಿಕ್ಕಮಗಳೂರು

ಭೀಕರ ಮಳೆ ಹಾಗೂ ಪ್ರವಾಹದಿಂದ ನೇಪಾಳದಲ್ಲಿ ಉಂಟಾಗಿರುವ ದುರಂತಕ್ಕೆ ಶೃಂಗೇರಿ ಶಾರದಾ ಪೀಠದ ಕಿರಿಯ ಜಗದ್ಗುರು ಶ್ರೀ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಪ್ರಕೃತಿ ವಿಕೋಪದಿಂದಾಗಿ ನೂರಾರು ಮಂದಿ ಮೃತಪಟ್ಟಿದ್ದು, ಸಾವಿರಾರು ಜನರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಸಂತ್ರಸ್ತರ ನೆರವಿಗೆ ಶೃಂಗೇರಿ ಪೀಠ ಮುಂದಾಗಿದೆ.



ನೇಪಾಳದ ಜನರಿಗೆ ಅಗತ್ಯ ನೆರವು ಒದಗಿಸಲು ಮಠ ಸಂಪೂರ್ಣವಾಗಿ ಸಿದ್ಧವಾಗಿದ್ದು, ತುರ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಮಠದ ಆಡಳಿತಾಧಿಕಾರಿಗಳಿಗೆ ಕಿರಿಯ ಶ್ರೀಗಳು ಸೂಚನೆ ನೀಡಿದ್ದಾರೆ. ಸಂತ್ರಸ್ತರಿಗೆ ಅಗತ್ಯ ಆಹಾರ, ದಿನಬಳಕೆಯ ವಸ್ತುಗಳು ಹಾಗೂ ಇತರ ಅಗತ್ಯ ನೆರವನ್ನು ತಕ್ಷಣವೇ ಒದಗಿಸುವಂತೆ ನಿರ್ದೇಶನ ನೀಡಲಾಗಿದೆ.

ಪ್ರವಾಹ ಹಾಗೂ ಭಾರಿ ಮಳೆಯಿಂದ ಮನೆ–ಮಠ ಕಳೆದುಕೊಂಡು ಸಂಕಷ್ಟದಲ್ಲಿರುವ ಜನರಿಗೆ ನೆರವಾಗುವುದು ಮಾನವೀಯ ಕರ್ತವ್ಯವಾಗಿದ್ದು, ಈ ಕಠಿಣ ಸಂದರ್ಭದಲ್ಲಿ ನೇಪಾಳದ ಜನರೊಂದಿಗೆ ಶೃಂಗೇರಿ ಪೀಠ ನಿಲ್ಲಲಿದೆ ಎಂದು ಶ್ರೀಗಳು ಸಂದೇಶದಲ್ಲಿ ತಿಳಿಸಿದ್ದಾರೆ.

ಪ್ರಾಕೃತಿಕ ದುರಂತದಲ್ಲಿ ಮೃತಪಟ್ಟವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಾಗೂ ಕುಟುಂಬಸ್ಥರನ್ನು ಕಳೆದುಕೊಂಡಿರುವವರಿಗೆ ದುಃಖವನ್ನು ಭರಿಸುವ ಶಕ್ತಿ ದೊರೆಯಲಿ ಎಂದು ಶ್ರೀಗಳು ಪ್ರಾರ್ಥಿಸಿದ್ದಾರೆ. ಪ್ರವಾಹದಿಂದ ಉಂಟಾಗಿರುವ ಅಪಾರ ನಷ್ಟ ಶೀಘ್ರವಾಗಿ ಪರಿಹಾರವಾಗಿ, ಸಂತ್ರಸ್ತರ ಬದುಕು ಸಹಜ ಸ್ಥಿತಿಗೆ ಮರಳಲಿ ಎಂದು ಹಾರೈಸಿದ್ದಾರೆ.

ಈ ಹಿನ್ನೆಲೆಯಲ್ಲಿ ಶೃಂಗೇರಿ ಶಾರದಾ ಪೀಠದಲ್ಲಿ ಶ್ರೀ ಶಾರದಾ ಪರಮೇಶ್ವರಿ ಹಾಗೂ ಶ್ರೀ ಚಂದ್ರಮೌಳೀಶ್ವರ ಸ್ವಾಮಿಗೆ ವಿಶೇಷ ಪೂಜೆ ಮತ್ತು ಪ್ರಾರ್ಥನೆ ಸಲ್ಲಿಸಲಾಗಿದೆ.

ನೇಪಾಳ ದೇಶವು ಈ ಸಂಕಷ್ಟದಿಂದ ಶೀಘ್ರ ಮುಕ್ತವಾಗಿ, ಜನಜೀವನ ಸಹಜ ಸ್ಥಿತಿಗೆ ಮರಳಬೇಕು. ದೇಶವು ಮತ್ತೆ ಅಭಿವೃದ್ಧಿ ಹಾಗೂ ಪ್ರಗತಿಯ ಹಾದಿಯಲ್ಲಿ ಮುನ್ನಡೆಯಬೇಕು ಎಂದು ಜಗದ್ಗುರುಗಳು ಹಾರೈಸಿದ್ದಾರೆ.

ಸಂತ್ರಸ್ತರಿಗೆ ತಕ್ಷಣದ ಪರಿಹಾರ, ಆಹಾರ ಮತ್ತು ಅಗತ್ಯ ವಸ್ತುಗಳ ನೆರವು ತಲುಪಿಸುವ ನಿಟ್ಟಿನಲ್ಲಿ ಮಠದ ಆಡಳಿತ ವ್ಯವಸ್ಥೆ ಕ್ರಮ ಕೈಗೊಳ್ಳಲಿದೆ.

ದುರಂತದಿಂದ ತೊಂದರೆಗೊಳಗಾದ ಜನರಿಗೆ ಸಾಧ್ಯವಾದಷ್ಟು ನೆರವು ನೀಡುವ ಮೂಲಕ ಸಂಕಷ್ಟದ ಸಮಯದಲ್ಲಿ ಮಾನವೀಯತೆ ಮತ್ತು ಸಹಾನುಭೂತಿಯ ಸಂದೇಶ ಸಾರಲು ಶಾರದಾ ಪೀಠ ಮುಂದಾಗಿದೆ.

# ಓವರ್‌ಟೇಕ್ ವಿಚಾರಕ್ಕೆ ಹಲ್ಲೆ:

## ದುನಿಯಾ ವಿಜಯ್ ಪುತ್ರನ ವಿರುದ್ಧ ಕೇಸ್

● ವಿಕ್ರಮ ವಾಹಿನಿ | ಬೆಂಗಳೂರು

ಓವರ್‌ಟೇಕ್ ಮಾಡಿದ ವಿಚಾರಕ್ಕೆ ಸಹಪಾಠಿಯನ್ನು ಕಾರಿನಲ್ಲಿ ಬಲವಂತವಾಗಿ ಕರೆದೊಯ್ದು ಹಲ್ಲೆ ನಡೆಸಿದ ಆರೋಪದ ಮೇಲೆ ನಟ ದುನಿಯಾ ವಿಜಯ್ ಪುತ್ರ ಸಾಮ್ರಾಟ್ ಹಾಗೂ ಆತನ ಸ್ನೇಹಿತರ ವಿರುದ್ಧ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಆರ್‌ವಿ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಮನೀಶ್ ಗೌಡ ಎಂಬುವವರು ನೀಡಿದ ದೂರಿನ ಪ್ರಕಾರ, ಕಾರು ಓವರ್‌ಟೇಕ್ ಮಾಡಿದ ವಿಚಾರವಾಗಿ ಸಾಮ್ರಾಟ್ ಹಾಗೂ ಮನೀಶ್ ನಡುವೆ ಸೋಮವಾರ ಗಲಾಟೆ ನಡೆದಿತ್ತು. ಬಳಿಕ ಮೈಸೂರು ರಸ್ತೆಯಲ್ಲಿರುವ ವಿಶ್ವವಿದ್ಯಾಲಯದ ಆವರಣದ ಹೊರಗೆ ಮನೀಶ್ ನಿಂತಿದ್ದ ವೇಳೆ ಸಾಮ್ರಾಟ್ ಹಾಗೂ ಆತನ ಸ್ನೇಹಿತರು ಕಾರಿನಲ್ಲಿ ಬಲವಂತವಾಗಿ ಕರೆದೊಯ್ದು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.

ಹಲ್ಲೆಯಿಂದ ಗಾಯಗೊಂಡ ಮನೀಶ್ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಬಳಿಕ ಕೆಂಗೇರಿ ಠಾಣೆಗೆ ದೂರು ನೀಡಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಆರೋಪಗಳ ಕುರಿತು ಪೊಲೀಸರು ಹೆಚ್ಚಿನ ಮಾಹಿತಿ ಸಂಗ್ರಹಿಸುತ್ತಿದ್ದಾರೆ.